ಸಂಪುಟ : 11 ಸಂಚಿಕೆ: 30 ಪುಟ : 4+2 ಬೆಲೆ: 3.00 ಶನಿವಾರ ಫೆಬ್ರವರಿ 30 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

SJSS LITTLE CHAMPS BB GURUKULAM PRE - PRIMARY & PRIMARY ENGLISH MEDIUM SCHOOL, MALLASAMUDRA- GADAG.
Near DAR POLICE QUARTERS, MALLASAMUDRA-GADAG-582103.
ADMISSION OPEN 2022-2023
Primary Classes 1st to 5th
CLASS AGE-LIMITS
PLAY HOME : 1-10 to 2-10
NURSERY : 2-10 to 3-10
L.K.G : 3-05 to 4-05
U.K.G : 4-05 to 5-05
1st Standard : 5-05 to 7-00
ADMISSIONS OPEN 2022-23
No Donation
CONTACT NO: 9480352778, 9742034143, 9620427360.
email:sjssgurukulam@gmail.com Web: www.sjssgurukulam.com
LIMITED SEATS Only! Application Forms Will Be Available in The Office

Volume : 11 Issue : 30 Pages : 4+2 Price : 3.00 Saturday February 28 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

## ಜನತಾ ದರ್ಶನ ಕಾರ್ಯಕ್ರಮ ಇತರರಿಗೂ ಮಾದರಿಯಾಗಲಿ



> ಪಂಚ ಗ್ಯಾರಂಟಿಗಳ ಕುರಿತು ಕೆಲವರು ಅಸೂಯೆಯಿಂದ ಟೀಕೆ ಮಾಡಿದ್ದಾರೆ. ರಾಜ್ಯ ಸರ್ಕಾರಕ್ಕೆ ಗ್ಯಾರಂಟಿ ಯೋಜನೆಗಳು ಹೊರೆಯಾಗಿಲ್ಲ. ಗ್ಯಾರಂಟಿ ಯೋಜನೆಗಳು ಜನರ ಮುಖದಲ್ಲಿ ನಗು ಮೂಡಿಸುವ ಕಾರ್ಯಕ್ರಮಗಳಾಗಿವೆ. ಬಡತನ ನಿರ್ಮೂಲನೆ ಮಾಡುವುದು ಹಾಗೂ ಬಡಜನರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವುದೇ ರಾಜ್ಯ ಸರ್ಕಾರದ ಮುಖ್ಯ ಉದ್ದೇಶವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳು ಮಾನವ ಹಕ್ಕುಗಳಾಗಬೇಕು. ನಮ್ಮದು ಸತ್ವ, ತತ್ವ ಆಧಾರಿತ ಆಡಳಿತವಾಗಿದೆ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.



**■ ವಿಜಯಸಾಕ್ಷಿ ಸುದ್ದಿ, ಗದಗ**

ತಮ್ಮ ಸಮಸ್ಯೆಗಳನ್ನು ಹೇಳಿಕೊಂಡು ಸರಕಾರಿ ಕಚೇರಿಗಳಿಗೆ ಬರುವ ಸಾರ್ವಜನಿಕರೇ ಪ್ರಭುಗಳಾಗಿದ್ದು, ಅವರ ಸೇವೆಗೆ ಅವಕಾಶ ಕಲ್ಪಿಸಲು ಜನತಾ ದರ್ಶನ ಕಾರ್ಯಕ್ರಮವು ಸೂಕ್ತ ವೇದಿಕೆಯಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರದಿಂದ ಎಲ್ಲ ಕಡೆಗೆ ಜನತಾದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಸಚಿವ ಸಂಪುಟದಲ್ಲಿ ಜಿಲ್ಲಾ ಮಟ್ಟದ ಜನತಾ ದರ್ಶನಕ್ಕೆ ವಿಶೇಷ ಮಹತ್ವವಿದೆ. ಯಾವ ಕಚೇರಿಯಲ್ಲಿ ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಸ್ಪಂದನೆ ಪಡೆದಿರುವುದಿಲ್ಲವೋ ಅಂಥವರು ಜನತಾ ದರ್ಶನ ಕಾರ್ಯಕ್ರಮದಲ್ಲಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಸಚಿವರು ತಿಳಿಸಿದರು.

ಜನತಾ ದರ್ಶನ ಕಾರ್ಯಕ್ರಮವಾಗುವುದಕ್ಕಿಂತ ಹತ್ತು ದಿನಗಳ ಮುಂಚೆಯೇ ಸಾರ್ವಜನಿಕರಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಈ ಕುರಿತು ಜಿಲ್ಲಾಡಳಿತದಿಂದ ವ್ಯಾಪಕ ಪ್ರಚಾರವನ್ನು ಕೈಗೊಳ್ಳಲಾಗಿದೆ. ವಿವಿಧೆಡೆಯಿಂದ ಬಂದಿರುವ ಸಾರ್ವಜನಿಕರಿಗೆ ಮೂಲಸೌಲಭ್ಯ ಕಲ್ಪಿಸಲಾಗಿದೆ. ಸಾರ್ವಜನಿಕರು ಸಾಧ್ಯವಾದರೆ ತಮ್ಮ ಸಮಸ್ಯೆಗಳಿಗೆ ಇಂದು ಸಂಜೆಯೊಳಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ. ಎರಡು ದಿವಸಗಳ ಹಿಂದೆ ಬಂದಿರುವ ಅರ್ಜಿಗಳ ಪರಿಹಾರಕ್ಕೆ ಆದಷ್ಟು ಶೀಘ್ರ ಘೋಷಣೆ ಮಾಡಲಾಗುವುದು ಎಂದರು.

ಜನತಾ ದರ್ಶನದಲ್ಲಿ ಈಗಾಗಲೇ 300ಕ್ಕೂ ಅಧಿಕ ಅರ್ಜಿಗಳನ್ನು ಸ್ವೀಕರಿಸಲಾಗಿದೆ. ಕಂದಾಯ ಇಲಾಖೆಯ–135, ನಗರಾಭಿವೃದ್ಧಿ ಕೋಶದ–38, ಜಿಲ್ಲಾ ಪಂಚಾಯತ್‌ಗೆ ಸಂಬಂಧಿತ–4, ವಿವಿಧ ಇಲಾಖೆಗಳ 123 ಅರ್ಜಿಗಳಿವೆ. 188 ಅರ್ಜಿಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ. ಉಳಿದವುಗಳಿಗೆ ಸ್ಪಂದಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಈ ಜನತಾ ದರ್ಶನ ಕಾರ್ಯಕ್ರಮ ಇತರರಿಗೆ ಮಾದರಿಯಾಗಬೇಕು. ಜನತಾ ದರ್ಶನದಲ್ಲಿ ▸▸3ನೇ ಪುಟಕ್ಕೆ

> ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ಯೋಜನೆಗಳ ಬಗ್ಗೆ ಮಾಹಿತಿ ಕೊರತೆ ಇದ್ದಲ್ಲಿ ಅಥವಾ ಯೋಜನೆ ಸೌಲಭ್ಯ ಪಡೆಯಲು ವಿಳಂಬವಾಗಿರುವವರು ಜನತಾ ದರ್ಶನದಲ್ಲಿ ಅರ್ಜಿ ಸಲ್ಲಿಸುತ್ತಾರೆ. ಫೆ. 16ರಿಂದಲೇ ಸಾರ್ವಜನಿಕರಿಂದ ಅರ್ಜಿ ಸ್ವೀಕೃತಿ ಕಾರ್ಯ ಪ್ರಾರಂಭಗೊಂಡಿದೆ. ಕೆಲವು ಅರ್ಜಿಗಳನ್ನು ಇತ್ಯರ್ಥಗೊಳಿಸಲಾಗಿದೆ. ಉಳಿದವುಗಳನ್ನು ನಿಗದಿತ ಕಾಲಾವಧಿಯಲ್ಲೇ ಇತ್ಯರ್ಥಗೊಳಿಸಿ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಕೆಲಸ ಮಾಡಬೇಕು ಎಂದು ತಿಳಿಸಿದರು.

### ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಜನತಾ ದರ್ಶನಕ್ಕೆ ಮೆಚ್ಚುಗೆಗಳ ಮಹಾಪೂರ

## ಜನತಾ ದರ್ಶನ ಬಡವರ ಪಾಲಿನ ಆಶಾಕಿರಣ




> ಗಜೇಂದ್ರಗಡ ತಾಲೂಕಿನ ನಾಗರಸಕೊಪ್ಪದ ಗ್ರಾಮದ ಶರಣು ಎಸ್.ಸೊಬರದ ಅವರು ಕೇಂದ್ರೀಯ ವಿದ್ಯಾಲಯ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮನವಿ ಸಲ್ಲಿಸಿ, ಜನತಾ ದರ್ಶನ ಜನರ ಅಹವಾಲುಗಳಿಗೆ ಸ್ಪಂದಿಸುವ ಪರಿಣಾಮಕಾರಿ ವೇದಿಕೆಯಾಗಲಿ ಎಂದು ಆಶಿಸಿದರು. ಅದೇ ಗ್ರಾಮದ ಭಾಗ್ಯಶ್ರೀ ಅಂಗಡಿ ಗೃಹಲಕ್ಷ್ಮೀ ಯೋಜನೆಯ ಹಣ ಜಮೆಯಾಗದಿರುವ ಕುರಿತು ಅಹವಾಲು ನೀಡಿ ತ್ವರಿತ ಪರಿಹಾರ ಕೋರಿದರು.

**■ ವಿಜಯಸಾಕ್ಷಿ ಸುದ್ದಿ, ಗದಗ**


ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ನಡೆದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವು ಜನಸಾಮಾನ್ಯರ ಪಾಲಿಗೆ ನಿಜವಾದ ಆಶಾಕಿರಣವಾಗಿ ಪರಿಣಮಿಸಿತು. ಜಿಲ್ಲೆಯ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ಸಚಿವರು ಹಾಗೂ ಅಧಿಕಾರಿಗಳ ಮುಂದಿಡುವ ಮೂಲಕ ತ್ವರಿತ ಪರಿಹಾರ ಕೋರಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿರಹಟ್ಟಿ ತಾಲೂಕಿನ ವಡವಿ ಹೊಸೂರು ಗ್ರಾಮದ ಪ್ರಭುಗೌಡ ಪಾಟೀಲ್, ತಮ್ಮ ಹೊಲದ ಬೋರ್‌ವೆಲ್‌ಗೆ ವಿದ್ಯುತ್ ಸಂಪರ್ಕ ಕಲ್ಪಿಸುವಂತೆ ಅಹವಾಲು ಸಲ್ಲಿಸಿ, ಜನತಾ ದರ್ಶನ ಕಾರ್ಯಕ್ರಮದಿಂದ ಬಡವರಿಗೆ ಮತ್ತು ರೈತರಿಗೆ ಬಹಳ ಅನುಕೂಲವಾಗಿದೆ. ಸರ್ಕಾರದ ದಿಟ್ಟ ಹೆಜ್ಜೆಯಿಂದ ಸಾಮಾನ್ಯರಿಗೆ ನ್ಯಾಯ ಸಿಗುವ ವೇದಿಕೆ ಸಿಕ್ಕಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಅದೇ ಗ್ರಾಮದ ನರಸಿಂಹಗೌಡ ಪಾಟೀಲರು ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಗ್ರೂಪ್–ಡಿ ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ನೀಡುವಂತೆ ಅರ್ಜಿ ಸಲ್ಲಿಸಿ, ಜನತಾ ದರ್ಶನದ ಮೂಲಕ ಅಧಿಕಾರಿಗಳು ಜನರ ಸಮಸ್ಯೆಗಳನ್ನು ಕೇಳಿ ತ್ವರಿತವಾಗಿ ಸ್ಪಂದಿಸುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ ನೇರ ಪರಿಹಾರ ದೊರೆಯುತ್ತಿದೆ ಎಂದರು.

ಮುಂಡರಗಿ ತಾಲೂಕಿನ ಕದಾಂಪುರ ಗ್ರಾಮದ ಬಸವರೆಡ್ಡಿ ಕೆ.ನಾಗನೂರು ಅವರು ತಮ್ಮ ಜಮೀನಿನಲ್ಲಿ ನೀರಿನ ಪೂರೈಕೆಯಿಂದ ಸುತ್ತಮುತ್ತಲಿನ ರೈತರಿಗೆ ಉಂಟಾಗಿರುವ ತೊಂದರೆ ಪರಿಹರಿಸಲು 25 ವೋಲ್ಟ್ ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್ ಅನ್ನು 63 ವೋಲ್ಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಮನವಿ ಮಾಡಿದರು. ರೈತರ ಸಮಸ್ಯೆಗಳಿಗೆ ಇಂತಹ ಕಾರ್ಯಕ್ರಮಗಳು ಸ್ಪೂರ್ತಿದಾಯಕವಾಗುತ್ತವೆ. ಕುಂದುಕೊರತೆಗಳನ್ನು ಬಗೆಹರಿಸಿದರೆ ಗ್ರಾಮೀಣ ಜನರಿಗೆ ಹೆಚ್ಚು ಪ್ರಯೋಜನವಾಗುತ್ತದೆ ಎಂದು ಹೇಳಿದರು. ▸▸3ನೇ ಪುಟಕ್ಕೆ

## ಜನತಾ ದರ್ಶನದ ಶಕ್ತಿ: ಐದೇ ನಿಮಿಷದಲ್ಲಿ ವಿದ್ಯಾರ್ಥಿನಿಗೆ ವಸತಿ ನಿಲಯ ಪ್ರವೇಶ!




**■ ವಿಜಯಸಾಕ್ಷಿ ಸುದ್ದಿ, ಗದಗ**

ಜನತಾ ದರ್ಶನ ಕಾರ್ಯಕ್ರಮವು ಸಾರ್ವಜನಿಕ ಸಮಸ್ಯೆಗಳಿಗೆ ತ್ವರಿತ ಪರಿಹಾರ ನೀಡುವ ವೇದಿಕೆಯಾಗಿದ್ದು, ಅದಕ್ಕೆ ನೈಜ ಉದಾಹರಣೆಯಾಗಿ ವಿದ್ಯಾರ್ಥಿನಿಯೊಬ್ಬಳಿಗೆ ಕೇವಲ ಐದು ನಿಮಿಷಗಳಲ್ಲಿ ವಸತಿ ನಿಲಯ ಪ್ರವೇಶ ಕಲ್ಪಿಸಿದ ಘಟನೆ ಗಮನ ಸೆಳೆದಿದೆ.

ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿ ಶುಕ್ರವಾರ ನಡೆದ ಜನತಾ ದರ್ಶನದಲ್ಲಿ ಸವಿತಾ ಎಂ. ಅಗಸಿಮನಿ ಅವರು ವಸತಿ ನಿಲಯ ಪ್ರವೇಶಕ್ಕಾಗಿ ಮನವಿ ಸಲ್ಲಿಸಿದರು. ಮನವಿಯನ್ನು ಪರಿಗಣಿಸಿದ ಸಚಿವ ಡಾ. ಎಚ್. ಕೆ. ಪಾಟೀಲ ಅವರ ಸೂಚನೆ ಮೇರೆಗೆ ತಕ್ಷಣ ಕ್ರಮ ಕೈಗೊಳ್ಳಲಾಯಿತು.

ಅದರಂತೆ ಸವಿತಾ ಅವರಿಗೆ ಡಿ. ದೇವರಾಜು ಅರಸು ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ಮಂಜೂರು ಮಾಡಲಾಗಿದ್ದು, ತಾಲ್ಲೂಕಾಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರು ಸ್ಥಳದಲ್ಲೇ ಆದೇಶ ಪತ್ರವನ್ನು ವಿತರಿಸಿದರು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಆಡಳಿತದ ಕಾರ್ಯಕ್ಷಮತೆ ಜನತಾ ದರ್ಶನದಲ್ಲಿ ಮತ್ತೊಮ್ಮೆ ಸಾಬೀತಾಗಿದೆ.

## ಮಂಗಳೂರು ಗ್ರಾಮದಲ್ಲಿ ಜಾತ್ರಾ ವೈಭವ: ಡಾ. ಬಸವರಾಜ್ ಬಳ್ಳಾರಿಗೆ 'ಕಾಯಕ ಭೂಷಣ' ಪ್ರಶಸ್ತಿ ಗೌರವ




**■ ವಿಜಯಸಾಕ್ಷಿ ಸುದ್ದಿ, ಕುಕನೂರು**

ತಾಲೂಕಿನ ಮಂಗಳೂರು ಗ್ರಾಮದಲ್ಲಿ ಶ್ರೀ ಮಂಗಳೇಶ್ವರ ಜಾತ್ರಾ ಮಹೋತ್ಸವದ ಸಂಭ್ರಮ ಜೋರಾಗಿ ನಡೆದಿದ್ದು, ಅದೇ ಸಂದರ್ಭದಲ್ಲಿ ಮಂಗಳೂರು ಗ್ರಾಮ ಘಟಕದ ಕರ್ನಾಟಕ ರಕ್ಷಣಾ ವೇದಿಕೆ 19ನೇ ವಾರ್ಷಿಕೋತ್ಸವವೂ ವಿಜೃಂಭಣೆಯಿಂದ ಆಚರಿಸಲಾಯಿತು.

ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಸಂಗೀತದ ವೈಭವ ಹಾಗೂ ಗೌರವ ಸನ್ಮಾನ ಕಾರ್ಯಕ್ರಮವು ವಿಶೇಷ ಆಕರ್ಷಣೆಯಾಗಿ ಮೂಡಿಬಂದಿತು. ಈ ಸಂದರ್ಭದಲ್ಲಿ ರಾಜ್ಯ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರು, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರು ಹಾಗೂ ಗದಗ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಬಸವರಾಜ್ ಬಳ್ಳಾರಿ ಅವರಿಗೆ "ಕಾಯಕ ಭೂಷಣ ಪುರಸ್ಕೃತ ಪ್ರಶಸ್ತಿ" ಪ್ರದಾನ ಮಾಡಿ ಗೌರವಿಸಲಾಯಿತು.

ಸಮಾಜ ಸೇವೆ, ನೌಕರರ ಹಕ್ಕುಗಳ ರಕ್ಷಣೆಗೆ ಸಲ್ಲಿಸಿದ ಸೇವೆ ಹಾಗೂ ಕನ್ನಡ ಸಂಸ್ಕೃತಿಯ ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಅವರಿಗೆ ಈ ಪ್ರಶಸ್ತಿ ನೀಡಲಾಗಿದೆ ಎಂದು ಆಯೋಜಕರು ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಸಂಘಟನೆಯ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದು, ಸನ್ಮಾನಿತರಿಗೆ ಅಭಿನಂದನೆಗಳ ಸುರಿಮಳೆಗೈದರು. ಜಾತ್ರಾ ಮಹೋತ್ಸವವು ಭಕ್ತಿಭಾವ, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಸಮೂಹ ಸಹಭಾಗಿತ್ವದ ಮೂಲಕ ಸಂಭ್ರಮದ ವಾತಾವರಣದಲ್ಲಿ ನೆರವೇರಿತು.

## ಹಬ್ಬಗಳು ಸಂಬಂಧಗಳನ್ನು ಗಟ್ಟಿಗೊಳಿಸುತ್ತವೆ

**■ ವಿಜಯಸಾಕ್ಷಿ ಸುದ್ದಿ, ಡಂಬಳ**

ಹಬ್ಬಗಳು ಸಂಬಂಧಗಳನ್ನು ಗಟ್ಟಿಗೊಳಿಸುತ್ತವೆ. ಎಲ್ಲರೂ ಕೂಡಿ ಆಚರಿಸಿದಾಗ ಅದಕ್ಕೆ ಒಂದು ಮಹತ್ವ ಸಿಗುತ್ತದೆ. ಕಾನೂನಿಗೆ ಪ್ರತಿಯೊಬ್ಬರೂ ಮಹತ್ವ ನೀಡಿ. ಇದಕ್ಕೆ ನಾಗರಿಕರ ಸಹಕಾರ ಮುಖ್ಯವಾಗಿದೆ ಎಂದು ಡಿವಾಯ್‌ಎಸ್‌ಪಿ ಪ್ರಭುಗೌಡ ಹೇಳಿದರು.

ಡಂಬಳ ಗ್ರಾಮದ ಪೊಲೀಸ್ ಹೊರಠಾಣೆಯ ಆವರಣದಲ್ಲಿ ಹೋಳಿ ಹಬ್ಬ ಹಾಗೂ ರಂಜಾನ್ ಹಬ್ಬದ ಪ್ರಯುಕ್ತ ಕರೆದಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿಂದೂ ಮತ್ತು ಮುಸ್ಲಿಂ ಬಾಂಧವರೊಂದಿಗೆ ಹಬ್ಬದ ಕುರಿತು ಚರ್ಚಿಸಿ, ಹಬ್ಬಗಳನ್ನು ಪರಸ್ಪರ ಗೌರವ, ಸಹಬಾಳ್ವೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು, ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಎಲ್ಲರ ಸಹಕಾರದೊಂದಿದೊಚರಿಸಲು ಮುಂದಾಗೋಣ ಎಂದು ಹೇಳಿದರು.

ಮುಂಡರಗಿ ಸಿಪಿಐ ಯಶವಂತ ಬಿಸನಳ್ಳಿ ಮಾತನಾಡಿ, ಯಾವುದೇ ಸಾಮರಸ್ಯ ಹಾಳಗದಂತೆ ಶಾಂತಿ ಸೌಹಾರ್ದತೆಯಿಂದ ಹಬ್ಬಗಳನ್ನು ಆಚರಿಸಬೇಕು. ಪಿಯುಸಿ ಮತ್ತು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳು ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಹಕಾರ ನೀಡಬೇಕು ಎಂದು ಹೇಳಿದರು. ಸಾಮಾಜಿ ಕಾರ್ಯಕರ್ತ ಮಂಜಯ್ಯಸ್ವಾಮಿ ಅರವಟಗಿಮಠ, ಅಂಜುಮನ್ ಅಧ್ಯಕ್ಷ ಬಶೀರಹಮ್ಮದ ತಾಂಬೋಟಿ ಮಾತನಾಡಿ, ಡಂಬಳ ಗ್ರಾಮದಲ್ಲಿ ಲಿಂ.ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಹಾಕಿಕೊಟ್ಟ ಸೌಹಾರ್ದತೆಯ ವಿಚಾರದಂತೆ ಗ್ರಾಮದಲ್ಲಿ ಜಾತಿ–ಮತ ಎನ್ನದೆ ಎಲ್ಲರೂ ಕೂಡಿ ಸೌಹಾರ್ದತೆಯಿಂದ ಆಚರಿಸುತ್ತೇವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಮೇಶ ಬೆಲ್ಲದ, ಶಶಿಕಾಂತ ಬಂಡಿಹಾಳ, ಶಿವಾನಂದ ಬಂಡಿ, ಖಾಜಾಹುಸೇನ ಹೊಸಪೇಟಿ, ಪ್ರಕಾಶ ಕೋತಂಬ್ರಿ, ಮಂಜು ತಳವಾರ, ರಾಯಸಾಬ ದೊಡ್ಡಮನಿ, ಮಾಬುಸಾಬ ಮೂಲಿಮನಿ, ವೆಂಕಟೇಶ ತಳವಾರ, ಹವಾಲ್ದಾರ ಎಸ್.ಡಿ. ಡೊಣ್ಣಿ, ಪೊಲೀಸ್ ಸಿಬ್ಬಂದಿಗಳಾದ ಎಚ್.ಪಿ. ಹಂಚನಾಳ, ಎಚ್.ಕೆ. ನದಾಫ್, ಗ್ರಾಮದ ಹಿರಿಯರು, ಯುವಕರು ಇದ್ದರು.





ಮೈಸೂರಿನಲ್ಲಿ ನಡೆದ 38ನೇ ಅಖಿಲ ಭಾರತೀಯ ಅಂಚೆ ಸಾಂಸ್ಕೃತಿಕ ಸಮ್ಮೇಳನದ ಸ್ಪರ್ಧೆಯಲ್ಲಿ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂ. ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯ ವಿದ್ಯಾರ್ಥಿ ಅಭಿಮನ್ಯು ಬಿ.ಗುಡ್ಡದ ತಬಲಾ ವಾದನಲ್ಲಿ ಪ್ರಥಮ ಸ್ಥಾನ ಪಡೆದು ಅಂತಾರಾಷ್ಟ್ರೀಯ ಖ್ಯಾತಿಯ ಸಂಗೀತಗಾರರಾದ ಪದ್ಮಶ್ರೀ ಡಾ. ಪಂ. ಎಂ. ವೆಂಕಟೇಶ ಕುಮಾರ ಗವಾಯಿಗಳವರಿಂದ ಪ್ರಶಸ್ತಿ ಸ್ವೀಕರಿಸಿದರು.

ಶಾಲೆಯ ತಬಲಾ ಶಿಕ್ಷಕರಾದ ವ್ಹಿ.ವ್ಹಿ. ಹೂಗಾರ ಇವರಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗೆ ಸಮಿತಿಯ ಕಾರ್ಯಾಧ್ಯಕ್ಷರು ಹಾಗೂ ಕಾರ್ಯದರ್ಶಿಗಳು, ಪಾಠಶಾಲೆಯ ಎಂ.ಎಸ್. ಹಿರೇಮಠ ಹಾಗೂ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಯವರು ಅಭಿನಂದನೆ ಸಲ್ಲಿಸಿದ್ದಾರೆ.

**ಕರ್ನಾಟಕ ರಾಜ್ಯ ನ್ಯಾಯಾಂಗ ಇಲಾಖೆ ನೌಕರರ ಸಂಘದ ಸದಸ್ಯರಿಗೆ ಸಾಹಿತಿ ಮಕಾನದಾರ ಕರೆ**

# ಎಂ. ಮಲ್ಲಿಕಾ ತಂಡವನ್ನು ಬೆಂಬಲಿಸಿ

ಸರ್ಕಾರಿ ನೌಕರರಲ್ಲಿ ಕರ್ತವ್ಯ ನಿಷ್ಠೆ, ಜವಾಬ್ದಾರಿ, ಸಮಯಪ್ರಜ್ಞೆ, ದಕ್ಷತೆ, ಸಾರ್ವಜನಿಕ ಸೇವೆಯ ಮಹತ್ವ ಮತ್ತು ಹೊಣೆಗಾರಿಕೆ ಪಾರದರ್ಶಕವಾಗಿರಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಇಲಾಖೆಗಳಿಗಿಂತ ನ್ಯಾಯಾಂಗ ಇಲಾಖೆಯೇ ನೌಕರ ಬಂಧುಗಳು. ಕಾರ್ಯದ ಒತ್ತಡ ನಡುವೆಯೂ ನಡುವೆಯೂ ಸೇವೆಗೆ ಕಂಕಣ ಬದ್ಧರಾಗಿದ್ದಾರೆ ಎಂಬುದು ದಿಟ.

ಆಡಳಿತ ಸೇವಕರು ನಿರ್ವಹಣಾತ್ಮಕ ಯಂತ್ರದ ಹೃದಯ ಭಾಗವೆಂದು ಸರ್ದಾರ್ ವಲ್ಲಭ ಭಾಯಿ ಪಟೇಲರು 1947ರಲ್ಲಿ ಹೇಳಿದ ಮಾತು ಸರ್ವಕಾಲಿಕ ಸತ್ಯ. ನೌಕರ ಬಂಧುಗಳ ದೂರದೃಷ್ಟಿತ್ವದ ಫಲವಾಗಿ 25 ವರ್ಷಗಳ ಹಿಂದೆಯೇ ಕರ್ನಾಟಕ ರಾಜ್ಯ ನ್ಯಾಯಾಂಗ ಇಲಾಖೆ ನೌಕರರ ಸಂಘ ಅಸ್ತಿತ್ವ–ಕ್ಕೆ ಬಂತು. ಸಂಬಂಧ ಮಾಸಪತ್ರಿಕೆ ನ್ಯಾಯಿಕ ಮಿತ್ರರ ಮುಖವಾಣಿಯಾಗಿ ಕಾರ್ಯನಿರ್ವಹಿಸಿದೆ. ಸಂಘ ಕಟ್ಟುವಲ್ಲಿ ಅನೇಕ ಹಿರಿಯರ ಶ್ರಮ, ಬೆವರಿನ ಪಾಲು ಕೂಡ ಅಲ್ಲಗಳೆಯುವಂತಿಲ್ಲ. ಬೇರೆ ಇಲಾಖೆ ನೌಕರ ಬಂಧುಗಳ ಒಗ್ಗಟ್ಟಿನ ಮುಂದೆ ನ್ಯಾಯಂಗ ಇಲಾಖೆಯ ಒಗ್ಗಟ್ಟು, ಸಂಘಟನಾ ಶಕ್ತಿ ಸ್ವಲ್ಪ ಕುಂದಿದೆ ಅಂತಲೇ ಹೇಳಬೇಕು.

ಅದಕ್ಕೆಲ್ಲ ಹಲವು ಕಾರಣಗಳಿವೆ. ದಿನಾಂಕ 28ರಂದು ರಾಜ್ಯ ಕಾರ್ಯಕಾರಿ ಸಮಿತಿಯ ಚುನಾವಣೆ ಮಹತ್ವದ ಘಟ್ಟ ತಲುಪಿದೆ. ನಿನ್ನೆಯಾದ ಲೋಪಗಳು ನಾಳೆಗೆ ಮರುಕಳಿಸಬಾರದು. ನೌಕರ ಬಂಧುಗಳ ಶ್ರೇಯಸ್ಸಿಗಾಗಿ ತಪಸ್ಸಿನ ರೀತಿಯಲ್ಲಿ ಹೋರಾಟ ಮಾಡುವ ಸಂಘದ ಸದಸ್ಯರ ಹಿತ ಕಾಯುವ ಪ್ರಾಮಾಣಿಕ ವ್ಯಕ್ತಿಗಳ ಕೈಗೆ ಅಧಿಕಾರದ ಚುಕ್ಕಾಣಿ ಕೊಡಬೇಕಿದೆ. ಹೊಸ ಕನಸುಗಳನ್ನು ನನಸು ಮಾಡಲು ಸಂಕಲ್ಪ ಹೊಂದಿರುವ ಅಭ್ಯರ್ಥಿಗಳ ಆಯ್ಕೆ ಮಾಡಬೇಕಾದರೆ ಜವಾಬ್ದಾರಿ ಕೂಡ ಇದೆ. ಮತದಾರ ಬಂಧುಗಳು ವಿವೇಚನೆಯಿಂದ ಆತ್ಮಸಾಕ್ಷಿಯ ಅನುಗುಣವಾಗಿ ಸಮರ್ಥ ನಾಯಕತ್ವ ಗುಣದ ಅಭ್ಯರ್ಥಿಗಳ ಗೆಲುವಿಗಾಗಿ ಮತದಾನ ಮಾಡಬೇಕಾಗಿದೆ.



ಓಪಿಎಸ್ ಜಾರಿಗಾಗಿ ರಾಷ್ಟ್ರವ್ಯಾಪ್ತಿ ಹೋರಾಟ ಮಾಡಿದ್ದು ಇತಿಹಾಸ. ನ್ಯಾಯಾಂಗ ಇಲಾಖೆಯ ಬಂಧುಗಳ ಏಕರೂಪ ವೇತನ, ಇಲಾಖೆ ಬಡ್ತಿ, ಶಿಶುಪಾಲನಾ ರಜೆ, ಖಾಲಿ ಹುದ್ದೆಗಳ ಭರ್ತಿ, ಹಿರಿಯ ಶಿರಸ್ತೇದಾರ ಹುದ್ದೆಗೆ ಪತ್ರಾಂಕಿತ ಸ್ಥಾನಮಾನ, ಅಧೀನ ನ್ಯಾಯಾಲಯಗಳಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸಿಕೊಡುವುದು, ಅಂತರ್ಜಿಲ್ಲಾ ವರ್ಗಾವಣೆ ಪದೋನ್ನತಿ, ವಾರ್ಷಿಕ ವೈದ್ಯಕೀಯ ತಪಾಸಣೆ, ಪಾರದರ್ಶಕ ಆಡಳಿತ, ಎಫ್‌ಎನ್‌ಜೆಪಿಸಿ ಅನುಷ್ಠಾನದಲ್ಲಿರುವ ಕೆಲ ತಾಂತ್ರಿಕ ತೊಂದರೆಗಳ ನಿವಾರಣೆ, ಅಧೀನ ನ್ಯಾಯಾಲಯಗಳ ಸಿಬ್ಬಂದಿ ಸಮಸ್ಯೆ, ಸಾಮಾಜಿಕ ನ್ಯಾಯ, ಪ್ರಾದೇಶಿಕ ನ್ಯಾಯ, ಲಿಂಗ ತಾರತಮ್ಯ ನಿವಾರಣೆ ಹೀಗೆ ಹಲವಾರು ಸಮಸ್ಯೆಗಳಿಗೆ ನಾಡಿನ ತುಂಬೆಲ್ಲ ಯಾವುದೇ ಮಹಿಳಾ ನೌಕರರ ಕಷ್ಟಗಳಿಗೆ ಸ್ಪಂದಿಸುವ ತಾಯಿಗುಣ ಹೊಂದಿದವರು ಎಂ. ಮಲ್ಲಿಕಾ.

ಇಂತಹ ಅಪರೂಪದ ಸಂಘಟನಾ ಚತುರ ನಾಯಕಿಗೆ ನಮ್ಮ ಬೆಂಬಲ ಅವಶ್ಯವಾಗಿದೆ. ಮಹತ್ವಾಕಾಂಕ್ಷೆಯು ಕಾರ್ಯಕ್ಷಮತೆಯನ್ನು ಮೀರಿಸಿದಾಗ ಅದು ಹತಾಶೆಗೆ ಕಾರಣವಾಗುತ್ತದೆ. ಆದರೆ, ಕಾರ್ಯಕ್ಷಮತೆಯು ಮಹತ್ವಾಕಾಂಕ್ಷೆಯನ್ನು ಮೀರಿಸಿ ದಾಗ ಅದನ್ನು ಯಶಸ್ಸು ಎಂದು ಕರೆಯುತ್ತಾರೆ. ಇಂತಹ ಯಶಸ್ಸಿಗೆ ಮುನ್ನುಡಿ ಬರೆಯಲು ಎಂ. ಮಲ್ಲಿಕಾ ಅವರ ತಂಡವನ್ನು ಬೆಂಬಲಿಸಿ.

**– ಎ.ಎಸ್. ಮಕಾನದಾರ.**

ಅಖಿಲ ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಉಪಾಧ್ಯಕ್ಷರಾಗಿ, ಎನ್‌ಪಿಎಸ್ ಹೋರಾಟದ ಮುಂಚೂಣಿಯಲ್ಲಿದ್ದು ದೇಶದ ತುಂಬ ತಿರುಗಾಡಿ ನೌಕರರ ಬಂಧುಗಳಲ್ಲಿ ಜಾಗೃತಿ ಮೂಡಿಸಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕಾರ್ಯಕಾರಿ ಸಮಿತಿಯಸದಸ್ಯರಾಗಿ ಋತುಚಕ್ರ ರಜೆ ಮಂಜೂರಾತಿಗಾಗಿ ಶ್ರಮಿಸಿ, ಕಳೆದ ಎರಡು ದಶಕಗಳಿಂದ ಹೋರಾಟದ ಹಾದಿಯಲ್ಲಿ ಕಾಲಿಗೆ ಚಕ್ರ ಕಟ್ಟಿಕೊಂಡು ಹೆಜ್ಜೆ ಹಾಕುತ್ತಿರುವ ಎಂ. ಮಲ್ಲಿಕಾ ಒಬ್ಬ ಸಮರ್ಥ ನಾಯಕತ್ವ ಗುಣದ ಅಭ್ಯರ್ಥಿ ಎಂಬುದರಲ್ಲಿ ಎರಡು ಮಾತಿಲ್ಲ ಎಂದು ಮಕಾನದಾರ ಅಭಿಪ್ರಾಯಪಟ್ಟಿದ್ದಾರೆ.

**ವಿದ್ಯಾರ್ಥಿಗಳಿಂದ 5ನೇ ಬಾರಿ ಪತ್ರ ಚಳುವಳಿ**

# ತಂಬ್ರಹಳ್ಳಿಗೆ ಡಿಗ್ರಿ ಕಾಲೇಜು ಮಂಜೂರು ಮಾಡಿ



2017ರಿಂದ ನಿರಂತರ ಹೋರಾಟ ನಡೆಸುತ್ತಾ, ಮೂರು ಬಾರಿ 17 ಕಿ.ಮೀ ದೂರದ ತಾಲೂಕು ಕೇಂದ್ರಕ್ಕೆ ಹಾಗೂ 17-08-2022ರಂದು 50 ಕಿ.ಮೀ ದೂರದ ಜಿಲ್ಲಾ ಕೇಂದ್ರಕ್ಕೆ ಪಾದಯಾತ್ರೆ ನಡೆಸಿ ಮನವಿ ಸಲ್ಲಿಸಲಾಗಿದೆ. ಡಿಗ್ರಿ ಕಾಲೇಜು ಆರಂಭಿಸಲು ಗ್ರಾಮ ಠಾಣಾ ವ್ಯಾಪ್ತಿಯಲ್ಲಿ 3 ಎಕರೆ ಸರ್ಕಾರಿ ಜಾಗ ಕಾಯ್ದಿರಿಸಲಾಗಿದೆ. ಈಗಾಗಲೇ ಮುಖ್ಯಮಂತ್ರಿ, ಉನ್ನತ ಶಿಕ್ಷಣ ಸಚಿವರು ಹಾಗೂ ಸಂಬಂಧಿತ ಅಧಿಕಾರಿಗಳಿಗೆ ಸುಮಾರು 3,000 ಪತ್ರಗಳನ್ನು ಬರೆದು ಮನವಿ ಸಲ್ಲಿಸಲಾಗಿದೆ.

**– ಅಕ್ಕಿ ತೋಟೇಶ್,** ಜಿ.ಪಂ ಮಾಜಿ ಸದಸ್ಯ.

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಕಂದಾಯ ಹೋಬಳಿ ಕೇಂದ್ರವಾದ ತಂಬ್ರಹಳ್ಳಿ ಗ್ರಾಮಕ್ಕೆ ಸರ್ಕಾರಿ ಪ್ರಥಮ ದರ್ಜೆ ಡಿಗ್ರಿ ಕಾಲೇಜು ಮಂಜೂರಾತಿಗಾಗಿ ವಿದ್ಯಾರ್ಥಿಗಳು ಐದನೇ ಬಾರಿ ಪತ್ರ ಚಳುವಳಿ ನಡೆಸಿ ಸರ್ಕಾರದ ಗಮನ ಸೆಳೆಯಲು ಪ್ರಯತ್ನಿಸಿದರು.

ಬುಧವಾರ ವಿದ್ಯಾರ್ಥಿಗಳು ಮುಖ್ಯಮಂತ್ರಿಗಳಿಗೆ ಉದ್ದೇಶಿಸಿ ಸುಮಾರು 1,000 ಪತ್ರಗಳನ್ನು ಬರೆದು ತಂಬ್ರಹಳ್ಳಿ ಅಂಚೆ ಕಚೇರಿಯ ಬಾಕ್ಸ್‌ಗಳಲ್ಲಿ ಹಾಕಿದರು. ಈ ಮೂಲಕ ಡಿಗ್ರಿ ಕಾಲೇಜು ಮಂಜೂರಾತಿ ಬೇಡಿಕೆಯನ್ನು ಮತ್ತೊಮ್ಮೆ ಸರ್ಕಾರದ ಗಮನಕ್ಕೆ ತರಲು ಮುಂದಾದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಅಕ್ಕಿ ತೋಟೇಶ್ ಮಾತನಾಡಿ, ತಂಬ್ರಹಳ್ಳಿ ಕಳೆದ 20 ವರ್ಷಗಳಿಂದ ಪದವಿ ಪೂರ್ವ ಕಾಲೇಜು ಹೊಂದಿರುವ ಶಿಕ್ಷಣ ಕೇಂದ್ರವಾಗಿದೆ. ಗ್ರಾಮದಲ್ಲಿ ನಾಡ ಕಚೇರಿ, ರಾಷ್ಟ್ರೀಕೃತ ಮೂರು ಬ್ಯಾಂಕುಗಳು, ಎಪಿಎಂಸಿ ಮಾರುಕಟ್ಟೆ, ಪೊಲೀಸ್ ಠಾಣೆ ಹಾಗೂ ರೈತ ಸಂಪರ್ಕ ಕೇಂದ್ರಗಳಿದ್ದು, ಸುಮಾರು 30 ಹಳ್ಳಿಗಳಿಗೆ ಕೇಂದ್ರಬಿಂದುವಾಗಿದೆ ಎಂದು ತಿಳಿಸಿದರು.

ತಂಬ್ರಹಳ್ಳಿ ಸುತ್ತಮುತ್ತ 10 ಕಿ.ಮೀ ವ್ಯಾಪ್ತಿಯ ಬಾಚಿಗೊಂಡನಹಳ್ಳಿ, ಹಂಪಸಾಗರ ಹಾಗೂ ಮೋರಿಗೇರಿ ಗ್ರಾಮಗಳಲ್ಲಿ ಪದವಿ ಪೂರ್ವ ಕಾಲೇಜುಗಳು ಮತ್ತು ಮೂರು ಐಟಿಐ ತರಬೇತಿ ಕೇಂದ್ರಗಳಿದ್ದು, ಒಟ್ಟು 400-500 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಜೊತೆಗೆ 150 ವಿದ್ಯಾರ್ಥಿನಿಯರ ಮೆಟ್ರಿಕ್ ನಂತರದ ಬಿಸಿಎಂ ವಸತಿ ನಿಲಯವೂ ಕಾರ್ಯನಿರ್ವಹಿಸುತ್ತಿದೆ.

ಆದರೆ ಪದವಿ ಕಾಲೇಜು ಇಲ್ಲದ ಕಾರಣ ಅನೇಕ ಬಡ ವಿದ್ಯಾರ್ಥಿಗಳು, ವಿಶೇಷವಾಗಿ ಬಾಲಕಿಯರು, ಪದವಿ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದು ಅವರು ವಿಷಾದಿಸಿದರು.

ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಲೋಕಸಭೆ ಸದಸ್ಯರೂ ಕಾಲೇಜು ಆರಂಭಕ್ಕೆ ಶಿಫಾರಸು ಮಾಡಿದ್ದರೂ, ಸರ್ಕಾರದಿಂದ ಇನ್ನೂ ಸ್ಪಷ್ಟ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದರು.

2026-27ನೇ ಶೈಕ್ಷಣಿಕ ವರ್ಷದಲ್ಲಾದರೂ ತಂಬ್ರಹಳ್ಳಿಯಲ್ಲಿ ಸರ್ಕಾರಿ ಪದವಿ ಕಾಲೇಜು ಪ್ರಾರಂಭಿಸಲು ಬಜೆಟ್ ಸಭೆಯಲ್ಲಿ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪಂಚಮಸಾಲಿ ಸಮಾಜದ ಮುಖಂಡ ಅಕ್ಕಿ ಶಿವಕುಮಾರ್, ಸಹಕಾರ ಸಂಘದ ಅಧ್ಯಕ್ಷ ಕೆ. ಮಾಬುಸಾಬ್, ಗೌರಜ್ಜನವರ ಬಸವರಾಜಪ್ಪ, ನಿವೃತ್ತ ಇಒ ಟಿ. ವೆಂಕೋಬಪ್ಪ, ಹ್ಯಾಟಿ ಆನಂದರೆಡ್ಡಿ, ಮರಿಯಮ್ಮನಹಳ್ಳಿ ಶಂಕರ್, ಪಟ್ಟಣಶೆಟ್ಟಿ ಸುರೇಶ್, ಕೆಎಚ್ ಎಂ. ಕೊಟ್ರಯ್ಯ, ಹೆಚ್.ಬಿ. ಬಸವನಗೌಡ, ಕಡ್ಡಿ ಚನ್ನಬಸಪ್ಪ, ಗ್ಯಾರಂಟಿ ಯೋಜನೆ ಸದಸ್ಯ ಜಿ. ಗಿರೀಶ್, ರೆಡ್ಡಿ ಬಸವಲಿಂಗನಗೌಡ, ಮೈನಳ್ಳಿ ಸುರೇಶ್, ರಮೇಶ ಪೂಜಾರ್ ಸೇರಿದಂತೆ ಎಬಿಟಿ ಕಾಲೇಜಿನ ವಿದ್ಯಾರ್ಥಿಗಳು, ಉಪನ್ಯಾಸಕರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ಯಡಿಯೂರಪ್ಪ ಜನ್ಮದಿನದ ಪ್ರಯುಕ್ತ ರೋಗಿಗಳಿಗೆ ಹಣ್ಣು-ಹಾಲು ವಿತರಣೆ



**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿ ಕ್ಷೇತ್ರದ ಭಾರತೀಯ ಜನತಾ ಪಾರ್ಟಿ ಮಂಡಲದ ನಗರ ಘಟಕದ ವತಿಯಿಂದ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ 85ನೇ ಜನ್ಮದಿನದ ಅಂಗವಾಗಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಹಿರಿಯ ಮುತ್ಸದ್ದಿ, ರೈತಪರ ನಾಯಕರೆಂದೇ ಖ್ಯಾತರಾಗಿರುವ ಯಡಿಯೂರಪ್ಪ ಅವರು 84 ವರ್ಷಗಳನ್ನು ಪೂರೈಸಿ 85ನೇ ವರ್ಷಕ್ಕೆ ಕಾಲಿಡುತ್ತಿರುವ ಹಿನ್ನೆಲೆಯಲ್ಲಿ ಅವರ ಆರೋಗ್ಯ, ಐಶ್ವರ್ಯ ಹಾಗೂ ದೀರ್ಘಾಯುಷ್ಯಕ್ಕಾಗಿ ಕಾರ್ಯಕರ್ತರು ಪ್ರಾರ್ಥಿಸಿದರು. ಮಹಿಳೆಯರ ಸಬಲೀಕರಣಕ್ಕಾಗಿ ಭಾಗ್ಯಲಕ್ಷ್ಮಿ ಯೋಜನೆ, ಸೈಕಲ್ ಯೋಜನೆಗಳಂತಹ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದು ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ ಅವರ ಸೇವೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು. ರಾಜ್ಯದಾದ್ಯಂತ ಸೈಕಲ್ ಮೂಲಕ ಸಂಚರಿಸಿ ಪಕ್ಷ ಸಂಘಟನೆ ಬಲಪಡಿಸಿ ಕರ್ನಾಟಕದಲ್ಲಿ ಬಿಜೆಪಿ ಅಧಿಕಾರಕ್ಕೆ ತರಲು ಹಗಲಿರುಳು ಶ್ರಮಿಸಿದ ಅವರ ನಾಯಕತ್ವವನ್ನು ಮುಖಂಡರು ಕೊಂಡಾಡಿದರು.

ಮಂಡಲ ಅಧ್ಯಕ್ಷ ಕೆ.ಎಸ್. ಪ್ರಕಾಶ್ ಅವರ ನೇತೃತ್ವದಲ್ಲಿ ಹಗರಿಬೊಮ್ಮನಹಳ್ಳಿ ಸಾರ್ವಜನಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು, ಬ್ರೆಡ್ ಹಾಗೂ ಹಾಲು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯದರ್ಶಿ ವಿ. ಕನಕಪ್ಪ, ಮಂಡಲ ಉಪಾಧ್ಯಕ್ಷ ಹಾಗೂ ಪುರಸಭೆ ಸದಸ್ಯ ಜೋಗಿ ಹನುಮಂತಪ್ಪ, ಪ್ರಧಾನ ಕಾರ್ಯದರ್ಶಿ ಕೋಗಳಿ ಹನುಮಂತಪ್ಪ, ನಗರ ಘಟಕದ ಅಧ್ಯಕ್ಷ ಮಂಜುನಾಥ್, ಎಸ್‌ಸಿ ಮೋರ್ಚಾ ಅಧ್ಯಕ್ಷ ದಶಮಾಪುರ ಮರಿಯಪ್ಪ ಹೆಚ್, ಯುವ ಮೋರ್ಚಾ ಅಧ್ಯಕ್ಷ ಮಂಜುನಾಥ್ ಗಜಪುರ, ರೈತ ಮೋರ್ಚಾ ಅಧ್ಯಕ್ಷ ಅಶೋಕ, ಬುಳ್ಳಪ್ಪ ಉಪ್ಪರಗಟ್ಟಿ, ಭೀಮಪ್ಪ ಮಾಲ್ವಿ, ರಮೇಶ್ ಶಿವಾನಂದನಗರ, ರಾಚಪ್ಪ, ಗೋಣೆಪ್ಪ ಕೆ., ಸಂದೀಪ್, ಮದ್ದನಿ ಸ್ವಾಮಿ, ದೊಡ್ಡಬಸಪ್ಪ ಬಾಚಿಕೊಂಡನಹಳ್ಳಿ, ಮಂಜುನಾಥ ಸ್ವಾಮಿ ಸೇರಿದಂತೆ ಅನೇಕ ಹಿರಿಯ ಮುಖಂಡರು, ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಹಂಪಾಪಟ್ಟಣದಲ್ಲಿ ಶರಣ ಬಸಪ್ಪನ ವಿವಾಹ ಮಹೋತ್ಸವ ವಿಜೃಂಭಣೆ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಹಂಪಾಪಟ್ಟಣ ಗ್ರಾಮದಲ್ಲಿ ದಾಸೋಹಿ ಶರಣ ಬಸಪ್ಪ ಪುರಾಣದ ಅಂಗವಾಗಿ ಶರಣ ಬಸಪ್ಪನ ವಿವಾಹ ಮಹೋತ್ಸವವು ಭಕ್ತಿಭಾವ ಮತ್ತು ಸಂಪ್ರದಾಯ ಸೊಬಗಿನ ನಡುವೆ ವಿಜೃಂಭಣೆಯಿಂದ ನೆರವೇರಿತು.



ಶ್ರೀ ಶರಣ ಬಸವೇಶ್ವರ ಸೇವಾ ಹಾಗೂ ಸಾಂಸ್ಕೃತಿಕ ಟ್ರಸ್ಟ್ ವತಿಯಿಂದ ಆಯೋಜಿಸಲಾದ 21ನೇ ವರ್ಷದ ಕಲಬುರ್ಗಿ ಶರಣಬಸವೇಶ್ವರ ಪುರಾಣ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ವಿವಾಹ ಮಹೋತ್ಸವ ಜರುಗಿತು. ಪುರಾಣ ಪ್ರವಚನವನ್ನು ಪರಮಪೂಜ್ಯ ಶ್ರೀ ರೇವಣಸಿದ್ದ ದೇವರು ನಡೆಸಿ, ಶರಣ ಬಸಪ್ಪನ ಜೀವನಮೌಲ್ಯಗಳು, ಭಕ್ತಿ ಹಾಗೂ ದಾಸೋಹ ತತ್ವಗಳ ಕುರಿತು ವಿವರವಾಗಿ ಉಪನ್ಯಾಸ ನೀಡಿದರು. ಇಂತಹ ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಸನಾತನ ಸಂಸ್ಕೃತಿ ಉಳಿಸಿ ಬೆಳೆಸುವಲ್ಲಿ ಮಹತ್ವದ್ದಾಗಿವೆ ಎಂದು ಅವರು ತಿಳಿಸಿದರು.

ವಿವಾಹ ಮಹೋತ್ಸವದಲ್ಲಿ ಹೆಣ್ಣಿನ ಕಡೆಯವರಾಗಿ ಕೇಶವರಾಯನಬಂಡಿ ದೈವಸ್ಥರು ಹಾಗೂ ಗಂಡಿನ ಕಡೆಯವರಾಗಿ ಸಮಿತಿಯವರು ಪಾಲ್ಗೊಂಡು ಸಂಪ್ರದಾಯಬದ್ಧ ವಿಧಿವಿಧಾನಗಳೊಂದಿಗೆ ಕಾರ್ಯಕ್ರಮ ನೆರವೇರಿಸಿದರು. ಪುರಾಣದ ಅಂಗಳವನ್ನು ರಂಗು-ರಂಗಿನ ರಂಗೋಲಿಗಳಿಂದ ಅಲಂಕರಿಸಿ ಭಕ್ತರ ಮನಸೆಳೆಯುವಂತೆ ಸಿಂಗಾರ ಮಾಡಲಾಗಿತ್ತು.

ಕಾರ್ಯಕ್ರಮವನ್ನು ಉದ್ದೇಶಿಸಿ ಶ್ರೀಕ್ಷೇತ್ರ ಧರ್ಮಸ್ಥಳ ಮಂಜುನಾಥ ಸಂಘದ ಯೋಜನಾಧಿಕಾರಿ ಚಂದ್ರಶೇಖರ ಮಾತನಾಡಿ, ಪುರಾಣ ಹಾಗೂ ಸಂಸ್ಕೃತಿ ಕಾರ್ಯಕ್ರಮಗಳು ಗ್ರಾಮೀಣ ಭಾಗದಲ್ಲಿ ಧಾರ್ಮಿಕ ಜಾಗೃತಿ ಮೂಡಿಸುವಲ್ಲಿ ಮಹತ್ವದ ಪಾತ್ರವಹಿಸುತ್ತವೆ ಎಂದು ಹೇಳಿದರು. ಹಂಪಾಪಟ್ಟಣ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಕೇಶವರಾಯನಬಂಡಿ ಗಣೇಶ್ ಮಾತನಾಡಿ, ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಏಕತೆ ಮತ್ತು ಭಕ್ತಿಭಾವ ವೃದ್ಧಿಗೆ ಕಾರಣವಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಶರಣ ಬಸಪ್ಪನ ವಿವಾಹ ಮಹೋತ್ಸವದ ಅಂಗವಾಗಿ ಗೊಂಬೆಗಳನ್ನು ನಿರ್ಮಿಸಿದ ಉಪ್ಪಾರ ಕಾಳಪ್ಪ ಅವರನ್ನು ಸಮಿತಿ ವತಿಯಿಂದ ಅಭಿನಂದಿಸಲಾಯಿತು.ಈ ಸಂದರ್ಭದಲ್ಲಿ ಬುಳ್ಳನಗೌಡ, ತಳವಾರ ಬಿದ್ದಪ್ಪ, ಉಪ್ಪಾರ ನಾಗಪ್ಪ, ಈಶ್ವರಗೌಡ, ಕಮ್ಮಾರ ಹನುಮಂತಪ್ಪ, ವಿ. ಗೋವಿಂದ, ಉಪ್ಪಾರ ನಾಗರಾಜ್, ಗೌಡ್ರ ಶರಣಪ್ಪ, ಕೊಟ್ರಗೌಡ, ಉಪ್ಪಾರ ರಂಗಪ್ಪ, ಇಟಗಿ ಸಣ್ಣ ಬಿದ್ದಪ್ಪ ಸೇರಿದಂತೆ ಹಲವರು ಕೈಜೋಡಿಸಿದರು. ಓ. ಮಲ್ಲಿಕಾರ್ಜುನ, ತಳವಾರ ಹನುಮಂತ, ಉಪ್ಪಾರ ತಿಮ್ಮಣ್ಣ ಹಾಗೂ ಪ್ರಸಾದ ವಿತರಿಸಿದ ಜಿ. ಪಕ್ಕಿರಪ್ಪ, ತಳವಾರ ಮಂಜು, ಸಿದ್ದರ ಉಮೇಶ್, ಗಂಟಿ ನಾಗರಾಜ್, ಬಸಾಪುರ ಬಸವರಾಜ, ತಾಯಪ್ಪ, ಉಪ್ಪಾರ ಬಸಪ್ಪ ಸೇರಿದಂತೆ ಯುವಕರು ಸೇವೆ ಸಲ್ಲಿಸಿದರು.

ಮುಖಂಡರಾದ ಹೆಚ್. ಭೀಮಪ್ಪ, ಗುಕ್ಕ ಹನುಮಂತಪ್ಪ, ಉಪ್ಪಾರ ಶಿವಣ್ಣ, ಮಾಲ್ವಿ ಕಿಟ್ಟಪ್ಪ, ಜಿ. ಶ್ರೀನಿವಾಸ, ಟಿ. ಹನುಮಂತ ಕಿಟ್ಟಪ್ಪ, ಬಡಿಗೇರ ಪಂಪಣ್ಣ ಸೇರಿದಂತೆ ನೂರಾರು ಭಕ್ತರು ಉಪಸ್ಥಿತರಿದ್ದರು.

ಪ್ರತಿನಿತ್ಯ ಗಾಯನ ಸೇವೆ ನೀಡಿದ ಶ್ರೀ ಗಾನಕೋಗಿಲೆ ನಾಗರಾಜ ಅವರ ಭಕ್ತಿಗೀತೆಗಳು, ತಬಲಾ ರಾಜಶೇಖರ ಅವರ ತಾಳಮದ್ದಲೆ, ಗೆಜ್ಜೆ ನಾದ ಹಾಗೂ ವಾಯಲಿನ್ ಮಾಂತ್ರಿಕ ಯಲ್ಲಪ್ಪ ಅವರ ಮನಮೋಹಕ ವಾದ್ಯನಾದ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಒಟ್ಟಾರೆ, ಶರಣ ಬಸಪ್ಪನ ವಿವಾಹ ಮಹೋತ್ಸವವು ಭಕ್ತಿ, ಸಂಸ್ಕೃತಿ ಮತ್ತು ಸಮೂಹ ಸಹಕಾರದ ಪ್ರತೀಕವಾಗಿ ಯಶಸ್ವಿಯಾಗಿ ನೆರವೇರಿತು.

**ರಾತ್ರಿ ವಿದ್ಯುತ್ ಅವ್ಯವಸ್ಥೆ ವಿರುದ್ಧ ರೈತರ ಆಕ್ರೋಶ**

# ವೇಳಾಪಟ್ಟಿ ಪರಿಷ್ಕರಣೆಗೆ ಜಸ್ಕಾಂ ಅಧಿಕಾರಿಗೆ ಮನವಿ

**■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಹಂಪಾಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ರಾತ್ರಿ ವೇಳೆಯಲ್ಲಿ ನೀಡಲಾಗುತ್ತಿರುವ ವಿದ್ಯುತ್ ಪೂರೈಕೆ ಅವ್ಯವಸ್ಥೆಯನ್ನು ಖಂಡಿಸಿ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರೈತರು ಜಸ್ಕಾಂ ಎಇಇ ನಾಗರಾಜ್ ಕುರೆಕುಪ್ಪ ಅವರಿಗೆ ಮನವಿ ಸಲ್ಲಿಸಿ, ವೇಳಾಪಟ್ಟಿ ಪರಿಷ್ಕರಿಸುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಿರಿಯ ಪತ್ರಕರ್ತರು ಹಾಗೂ ಹೋರಾಟಗಾರರಾದ ಬಡ್ಡಿ ಬಸವರಾಜ್, ಹಂಪಾಪಟ್ಟಣ ಭಾಗದ ರೈತರಿಗೆ ಸಂಜೆ 5ರಿಂದ ರಾತ್ರಿ 12ರವರೆಗೆ ನೀಡಲಾಗುತ್ತಿರುವ ವಿದ್ಯುತ್ ಪೂರೈಕೆ ಅವಧಿ ಅನಾನುಕೂಲಕರವಾಗಿದೆ ಎಂದು ಹೇಳಿದರು. ಮೂರು ಪಾಳೆಯ ವಿದ್ಯುತ್ ಪೂರೈಕೆ ಕ್ರಮ ಜಾರಿಗೆ ಬಂದ ಬಳಿಕ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.



ರಾತ್ರಿ ವೇಳೆಯಲ್ಲಿ ಬೆಳಕಿನ ಕೊರತೆ, ಕೀಟಗಳ ಕಾಟ, ಕಾಡುಪ್ರಾಣಿಗಳ ಸಂಚಾರ ಹಾಗೂ ಮಹಿಳಾ ಕೃಷಿಕರ ಭದ್ರತಾ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ನೀರಾವರಿ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಇದರ ಪರಿಣಾಮವಾಗಿ ಬೆಳೆಗಳ ಬೆಳವಣಿಗೆ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಆತಂಕ ಎದುರಾಗಿದೆ ಎಂದು ರೈತರು ತಿಳಿಸಿದರು. ಜಿಲ್ಲಾ ರೈತ ಮುಖಂಡರಾದ ಬಂಟರು ಕುಬೇರಪ್ಪ ಅವರು ಮಾತನಾಡಿ, ರೈತರ ಹಿತದೃಷ್ಟಿಯಿಂದ ಹಗಲು ವೇಳೆಯಲ್ಲಿ ವಿದ್ಯುತ್ ಪೂರೈಕೆ ನೀಡಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಅಧ್ಯಕ್ಷ ಗೂಳಿ ಕೊಟ್ರೇಶ್, ರೈತರ ಸಮಸ್ಯೆಗೆ ಸ್ಪಂದನೆ ನೀಡದಿದ್ದರೆ ಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಸಿದರು.

ರೈತಪರ ಹೋರಾಟಗಾರ ಶೀಗೆನಹಳ್ಳಿ ಬಸವರಾಜ್ ಅವರು ಬೆಳೆ ರಕ್ಷಣೆಗೆ ಹಗಲು ವಿದ್ಯುತ್ ಅತ್ಯಾವಶ್ಯಕ ಎಂದು ತಿಳಿಸಿದರು. ತಾಲೂಕು ಕಟ್ಟಡ ಕಾರ್ಮಿಕ ಸಂಘದ ಅಧ್ಯಕ್ಷ ಖಾಜಾಸಾಬ್, ವಿ.ಎಸ್.ಎಸ್.ಎನ್ ಹಂಪಾಪಟ್ಟಣ ಅಧ್ಯಕ್ಷ ಗಾಳಮ್ಮನವರ ಹುಲುಗಪ್ಪ, ಹಿರಿಯ ರೈತ ಮುಖಂಡ ಬಂಟರ ಸೋಮಣ್ಣ, ಜನನಿ ಸೇವಾ ಟ್ರಸ್ಟ್ ಅಧ್ಯಕ್ಷ ಕೇಶವಮೂರ್ತಿ, ಯುವ ಮುಖಂಡ ಟಿ.ನಾಗೇಶ್, ಹಿರಿಯರಾದ ದಾದಾಪೀರ್, ಹಾಲು ಉತ್ಪಾದಕ ಸಂಘದ ಅಧ್ಯಕ್ಷ ಕರಿಬಸಪ್ಪ, ತಿಪ್ಪೆಗುಂಡಿ ಗೋಣಿ ಸ್ವಾಮಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ವೇಳೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ವಿದ್ಯಾರ್ಥಿಗಳ ಅಧ್ಯಯನಕ್ಕೂ ವಿದ್ಯುತ್ ವ್ಯತ್ಯಯದಿಂದ ತೊಂದರೆ ಉಂಟಾಗುತ್ತಿರುವುದಾಗಿ ಗ್ರಾಮಸ್ಥರು ಗಮನ ಸೆಳೆದರು. ಗ್ರಾಮಗಳಲ್ಲಿ ನಿರಂತರ ಹಾಗೂ ಅನುಕೂಲಕರ ವೇಳೆಯಲ್ಲಿ ವಿದ್ಯುತ್ ಪೂರೈಕೆ ಒದಗಿಸುವಂತೆ ಅಧಿಕಾರಿಗಳಿಗೆ ಮನವಿ ಮಾಡಿದರು.

# ಪಂ. ಡಾ. ಪುಟ್ಟರಾಜ ಕವಿ ಗವಾಯಿಗಳವರ ಜಯಂತ್ಯುತ್ಸವ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನ ಹಾಗೂ ಅಶ್ವಿನಿ ಪ್ರಕಾಶನ ವತಿಯಿಂದ ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳವರ 112ನೇ ಜಯಂತ್ಯುತ್ಸವದ ಪ್ರಯುಕ್ತ ಮಾರ್ಚ್ 3ರಂದು ವಿಶ್ವೇಶ್ವರಯ್ಯ ನಗರದ ರಾಜಲಕ್ಷ್ಮೀ ನಿಲಯದಲ್ಲಿ ಶ್ರೀ ಗುರು ಪುಟ್ಟರಾಜರ ಜಯಂತ್ಯುತ್ಸವ ನೆರವೇರಲಿದೆ.

ಕಾರ್ಯಕ್ರಮದಲ್ಲಿ ಶ್ರೀಗುರು ಪುಟ್ಟರಾಜ ಕವಿ ಗವಾಯಿಗಳವರ ರಾಜ್ಯಮಟ್ಟದ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಪರಮ ಪೂಜ್ಯ ಡಾ. ಕಲ್ಲಯ್ಯಜ್ಜನವರು ವಹಿಸುವರು. ಶ್ರೀ ಮ.ನಿ.ಪ್ರ ಗುರುಶಾಂತೇಶ್ವರ ಮಹಾಸ್ವಾಮಿಗಳು ವಿರಕ್ತಮಠ ಇವರಿಗೆ ಅಶ್ವಿನಿ ಪ್ರಕಾಶನದ ಪ್ರಕಟನೆಯ ಗ್ರಂಥಗಳ ತುಲಾಭಾರವನ್ನು ಸಮರ್ಪಣೆ ಮಾಡಲಾಗುವುದು.

ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗುರಪ್ಪ ಕುರ್ತಕೋಟಿ, ಡಾ. ಪ್ರೇಮಲತಾ ಬಿ.ಹಿರೇಮಠ, ಡಾ. ಚಂದ್ರಶೇಖರ ಮಾಡಲಗೇರಿ, ಸಿದ್ದನಗೌಡ್ರ ವೀರನಗೌಡ್ರ ಪಾಟೀಲ ಭಾಗವಹಿಸುವರು ಎಂದು ಪ್ರತಿಷ್ಠಾನದ ಉಪಾಧ್ಯಕ್ಷರಾದ ಪುಟ್ಟರಾಜಸ್ವಾಮಿ ವ್ಹಿ.ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮ

# ಪಾರಮಾರ್ಥಿಕ ಜ್ಞಾನ ಭವ್ಯ, ಪವಿತ್ರವಾದುದು

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಸಮಸ್ಯೆಗಳು ಇಲ್ಲದ ಮನುಷ್ಯನೇ ಇಲ್ಲ. ಸಮಸ್ಯೆಗಳು ಅಡ್ಡಿಪಡಿಸುವ ತಡೆಗೋಡೆಗಳಲ್ಲ. ಸಾಗಬೇಕಾದ ದಾರಿಯ ದಿಕ್ಸೂಚಿಯಾಗಿವೆ. ನೀರಿನಲ್ಲಿ ಸ್ನಾನ ಮಾಡಿದರೆ ಬಟ್ಟೆ ಬದಲಿಸಬಹುದು. ಆದರೆ ಬೆವರಿನಲ್ಲಿ ಸ್ನಾನ ಮಾಡಿದರೆ ಇತಿಹಾಸವನ್ನು ಬದಲಿಸಬಹುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಧರ್ಮ ಧ್ವಜಾರೋಹಣ ಮತ್ತು ಹರಿದ್ರಾ ಲೇಪನ ಪೂಜೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆಯನ್ನಿತ್ತು ಆಶೀರ್ವಚನ ನೀಡುತ್ತಿದ್ದರು.



ಆಧುನಿಕ ವಿಜ್ಞಾನ ಎಲ್ಲಿ ನಿರುತ್ತರವಾಗುವುದೋ ಅಲ್ಲಿಂದ ಭಾರತೀಯ ಆಧ್ಯಾತ್ಮ ಚಿಂತನೆ ಪ್ರಾರಂಭಗೊಳ್ಳುತ್ತದೆ ಎಂದು ಡಾ. ಎಸ್. ರಾಧಾಕೃಷ್ಣನ್ ಹೇಳಿದ ಮಾತು ಸತ್ಯ. ಲೌಕಿಕ ಜ್ಞಾನ ಭೌತಿಕ ಬದುಕಿಗೆ ಬೇಕಾದ ಶ್ರದ್ಧೆ, ಆಸಕ್ತಿ, ಪರಿಶ್ರಮ ನಿಷ್ಠೆ ಹಾಗೂ ಸಮರ್ಪಣೆ ಮೂಲಕ ಪಡೆಯಲು ಸಾಧ್ಯ. ಪಾರಮಾರ್ಥಿಕ ಜ್ಞಾನ ಅತ್ಯಮೂಲ್ಯ. ಪಾರಮಾರ್ಥಿಕ ಜ್ಞಾನ ಭವ್ಯ ಹಾಗೂ ಪವಿತ್ರವಾದುದು ಎಂದರು.

ಪವಿತ್ರ ಸಮಾರಂಭದಲ್ಲಿ ಯಡಿಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು, ಮಳಲಿ ಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯ ಸ್ವಾಮಿಗಳು, ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು, ಬೇರುಗಂಡಿ ಬೃಹನ್ ಮಠದ ರೇಣುಕ ಮಹಾಂತ ಶಿವಾಚಾರ್ಯ ಸ್ವಾಮಿಗಳು, ಕೊಣ್ಣೂರು ಮರಡಿಮಠದ ಪವಾಡೇಶ್ವರ ಶಿವಾಚಾರ್ಯ ಸ್ವಾಮಿಗಳು, ಹುಡುಗಿ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು, ಅಡ್ನೂರು ಬೃಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು, ಚಿಮ್ಮಲಗಿ ಹಿರೇಮಠದ ಸಿದ್ಧರೇಣುಕ ಶಿವಾಚಾರ್ಯ ಸ್ವಾಮಿಗಳು ಮತ್ತು ದೊಡ್ಡಸಗರ ನಾಗಠಾಣ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಜಿ.ಪಂ ಮಾಜಿ ಉಪಾಧ್ಯಕ್ಷ ಎಂ.ಎಸ್. ಚನ್ನಕೇಶವ, ಆರ್.ಡಿ. ಮಹೇಂದ್ರ, ಮಹೇಶ ಆಚಾರಿ, ಕೋಕಿಲಮ್ಮ, ಎಂ.ಎಸ್. ಅರುಣೇಶ್, ಹನೀಫ್, ಹಿರಿಯಣ್ಣ ಮೊದಲಾದ ಗಣ್ಯರು ಧರ್ಮ ಧ್ವಜಾರೋಹಣ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಬೆಳಗಿನ ಸಂದರ್ಭದಲ್ಲಿ ನ್ಯಾಮತಿ ಬಸವರಾಜ ಹೊಸಕಟ್ಟೆ ನೇತೃತ್ವದಲ್ಲಿ ಶ್ರೀ ವೀರಭದ್ರಸ್ವಾಮಿಗೆ ಗುಗ್ಗುಳ ಪೂಜಾ ನೆರವೇರಿತು. ದಾವಣಗೆರೆ ಶುಭಾ-ಈಶ್ವರಪ್ಪ ಶೆಟ್ಟರು, ಲಲಿತಾ-ಶಿವಯೋಗಿ, ಮಲ್ಲಮ್ಮ-ಪ್ರಭುಶಾಸ್ತ್ರಿ, ಗಿರಿಜಾ-ಕೆ.ವಿ.ಮಲ್ಲಿಕಾರ್ಜುನ ಕುಟುಂಬದವರು ಗುಗ್ಗುಳ ಸೇವಾಕರ್ತರಾಗಿ ಪಾಲ್ಗೊಂಡಿದ್ದರು. ಬೋಜಪ್ಪ ನಾಗರಾಜ ಹೊಸಮನೆ ಸಂಗಡಿಗರು ಮತ್ತು ನ್ಯಾಮತಿ ಶ್ರೀ ವೀರಭದ್ರೇಶ್ವರ ಪುರವಂತಿಕೆ ಕಲಾ ತಂಡದವರು ಗುಗ್ಗುಳ ಸೇವೆ ಸಲ್ಲಿಸಿದರು.

ಬದುಕಿನ ಯಶಸ್ವಿಗಾಗಿ ಲೌಕಿಕ ಜ್ಞಾನ ಹೇಗೆ ಅವಶ್ಯಕವೋ ಹಾಗೆಯೇ ನೊಂದ ಬೆಂದ ಮನಕ್ಕೆ ಆಧ್ಯಾತ್ಮಿಕ ಜ್ಞಾನ ಅವಶ್ಯಕವಾಗಿದೆ. ಕಲಿಯುವ ಹಣ ಸಂಪಾದನೆ ಮಾಡುವ ಕೀರ್ತಿ ಸಂಪಾದಿಸುವುದಷ್ಟೇ ಜೀವನದ ಗುರಿಯಲ್ಲ. ಸಂಸ್ಕಾರ ಮತ್ತು ಆದರ್ಶ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಬರುವ ಅಗತ್ಯವಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮ ಗ್ರಂಥದಲ್ಲಿ ನಿರೂಪಿಸಿದ್ದಾರೆ ಎಂದು ರಂಭಾಪುರಿ ಶ್ರೀಗಳು ತಿಳಿಸಿದರು.

ಬಸವ ಯೋಗ ಮಂದಿರದಲ್ಲಿ ಭಾವೈಕ್ಯತಾ ದಿನಾಚರಣೆ

# ತ್ರಿವಿಧ ದಾಸೋಹಿ ಡಾ. ತೋಂಟದ ಶ್ರೀಗಳು



■ ವಿಜಯಸಾಕ್ಷಿ ಸುದ್ದಿ, ಗದಗ

ತ್ರಿವಿಧ ದಾಸೋಹ ಎಂದರೆ ಅನ್ನ, ಅಕ್ಷರ, ಜ್ಞಾನಗಳ ಸೇವೆ ಎಂದು ಎಲ್ಲರೂ ಅರ್ಥೈಸುವದು ಸಹಜ. ಪೂಜ್ಯ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ತಮ್ಮ ಜೀವಿತಾವಧಿಯಲ್ಲಿ ಪ್ರಪ್ರಥಮವಾಗಿ (1975) ಶ್ರೀಮನ್ನಿರಂಜನ ಯಳಂದೂರು ಬಸವಲಿಂಗ ಮಹಾಸ್ವಾಮಿಗಳವರ ಸ್ಮಾರಕ ಯೋಗಪಾಠಶಾಲೆ ಪ್ರಾರಂಭಿಸಿ ಜನತೆಯಲ್ಲಿ ಆರೋಗ್ಯದ ಅರಿವು ಮೂಡಿಸಿದರು ಎಂದು ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ತಿಳಿಸಿದರು.

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ ಪೂಜ್ಯಶ್ರೀ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ 77ನೇ ಜಯಂತಿ ಪ್ರಯುಕ್ತ ಭಾವೈಕ್ಯತಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರತಿದಿನ ಹಸಿದವರಿಗೆ, ಯಾತ್ರಿಗಳಿಗೆ, ಬಡ ವಿದ್ಯಾರ್ಥಿಗಳಿಗೆ ಪ್ರಸಾದ ಸಿಗಲೆಂದು ಶ್ರೀ ತೆ-ೂಂಟದಾರ್ಯ ಉಚಿತ ಪ್ರಸಾದ ನಿಲಯ ಪ್ರಾರಂಭಿಸಿದರು. ಎಲ್ಲ ಮಕ್ಕಳಿಗೂ ವಿವಿಧ ರೀತಿಯ ಶಿಕ್ಷಣ ದೊರೆಯಲೆಂದು ಶಾಲೆ-ಕಾಲೇಜು, ಕೈಗಾರಿಕಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ ತ್ರಿವಿಧ ದಾಸೋಹ ಪದದರ್ಥವನ್ನು ಸಾಕಾರಗೊಳಿಸಿ ತ್ರಿವಿಧ ದಾಸೋಹಿ ಎಂದು ಪ್ರಖ್ಯಾತರಾದವರು ಪೂಜ್ಯ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಎಂದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಮಾಜಿ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಸಮಾಜ ಸೇವಾ ಕಾರ್ಯಕರ್ತೆ ವೀಣಾ ಅಕ್ಕಿ ಉಪಸ್ಥಿತರಿದ್ದು ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭಿಕರ ಪರವಾಗಿ ಶಾಂತಾ ಕುಂದಗೋಳ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಎಂ.ವಿ. ಐಹೊಳ್ಳಿ, ಪ್ರಶಾಂತ ಆಂಧ್ರಾ, ಕವಿತಾ ಮರಿಗೌಡರ, ಮಹಾದೇವಿ ಚರಂತಿಮಠ, ಬಸವ ಯೋಗ ಮಹಾವಿದ್ಯಾಲಯದ ವಿದ್ಯಾರ್ಥಿವೃಂದ ಮತ್ತು ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಯೋಗ ಸಾಧಕರು ಉಪಸ್ಥಿತರಿದ್ದರು.

ಗೌರಿ ಜಿರಂಕಳಿ ಪ್ರಾರ್ಥಿಸಿದರು. ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯೆ ಗಿರಿಜಾ ಅಂಗಡಿ ಸ್ವಾಗತಿಸಿದರು. ನಗರಸಭಾ ಆರೋಗ್ಯ ಇಲಾಖೆ ಇಂಜಿನಿಯರ್ ಆನಂದ ಬದಿ ಕಾರ್ಯಕ್ರಮ ನಿರೂಪಿಸಿದರು. ಕವಿತಾ ಗಾಳಪ್ಪನವರ ವಂದಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪೂಜ್ಯರು ನನಗೆ ಅನ್ನ, ಆಶ್ರಯ ನೀಡಿ ಸುಂದರ ಬದುಕು ಕಟ್ಟಿಕೊಳ್ಳಲು ಮೂಲ ಕಾರಣೀಭೂತರಾಗಿದ್ದಾರೆ. ಇದರಿಂದ ಋಣಮುಕ್ತನಾಗಲು ಇಂದಿಗೂ ನಾನು ಅವರ ನಡೆ-ನುಡಿಗಳನ್ನು ಪಾಲಿಸುವದಲ್ಲದೆ ಯೋಗ ಶಿಕ್ಷಣ ಪ್ರಸಾರ, ಪ್ರಚಾರ ಸೇವೆಯಲ್ಲಿ ನಿರತನಾಗಿ ಜನತೆಯ ಆರೋಗ್ಯ ಸಂರಕ್ಷಣಾ ಕಾರ್ಯಕ್ಕೈಗೊಂಡಿದ್ದೇನೆ ಎಂದರು.

# ಧ.ಗ್ರಾ ಯೋಜನೆಯಿಂದ ವಾತ್ಸಲ್ಯ ಮನೆ ನಿರ್ಮಾಣ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ಹೊಂಬಳ ವಲಯದ ಹುಯಿಲಗೋಳ ಕಾರ್ಯಕ್ಷೇತ್ರದಲ್ಲಿ ಮಾಶಾಸನ ಪಡೆಯುತ್ತಿದ್ದ ಹುಸೇನಮ್ಮ ಅವರಿಗೆ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಾತ್ಸಲ್ಯ ಮನೆ ನಿರ್ಮಿಸಿ ಜಿಲ್ಲಾ ನಿರ್ದೇಶಕರಾದ ಕೇಶವ ದೇವಾಂಗ ಅವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ತಾಲೂಕಾ ಯೋಜನಾಧಿಕಾರಿಗಳಾದ ಉಮಾ, ಕೊಪ್ಪಳ ಪ್ರಾದೇಶಿಕ ವಿಭಾಗದ ಜ್ಞಾನವಿಕಾಸ ಯೋಜನಾಧಿಕಾರಿಗಳಾದ ಸುಧಾ, ಗ್ರಾಮ ಪಂಚಾಯತಿ ಸದಸ್ಯರು ಊರಿನ ಗಣ್ಯರು, ನವಜೀವನ ಸಮಿತಿಯ ಸದಸ್ಯರು, ವಲಯದ ಮೇಲ್ವಿಚಾರಕರು, ಜ್ಞಾನವಿಕಾಸ ಸಮನ್ವಯ ಅಧಿಕಾರಿ, ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಛಬ್ಬಿ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶುಕ್ರವಾರ ಶಿರಹಟ್ಟಿ ತಾಲೂಕಿನ ಗುಡ್ಡದಪೂರ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಛಬ್ಬಿ ಕ್ಲಸ್ಟರ್ ಮಟ್ಟದ ಕಲಿಕಾ ಹಬ್ಬ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಗದಗ ಡಯಟ್‌ನ ಉಪನಿರ್ದೇಶಕ (ಅಭಿವೃದ್ಧಿ) ಜಿ.ಎಂ. ಮುಂದಿನಮನಿ, ಮಕ್ಕಳ ಕಲಿಕಾ ಸುಧಾರಣೆಗೆ ಇಲಾಖೆಯು ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಿದ್ದು, ಇದರ ಸದುಪಯೋಗವನ್ನು ಪಡೆದುಕೊಂಡು ಎಲ್ಲರೂ ಶೈಕ್ಷಣಿಕವಾಗಿ ಮುಖ್ಯವಾಹಿನಿಗೆ ಬರಬೇಕೆಂದು ಕರೆ ನೀಡಿದರು.

ಬಿಇಓ ಎಚ್.ಎನ್. ನಾಯಕ, ಗದಗ ಡಯಟ್‌ನ ಹಿರಿಯ ಉಪನ್ಯಾಸಕ ಎಚ್.ಬಿ. ರಡ್ಡೇರ, ಅರವಟಗಿ, ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ, ಇಸಿಓ, ಎಸ್‌ಡಿಎಂಸಿ ಪದಾಧಿಕಾರಿಗಳು ಹಾಗೂ ಕ್ಲಸ್ಟರ್ ವ್ಯಾಪ್ತಿಯ ಮುಖ್ಯೋಪಾಧ್ಯಾಯರು ಭಾಗವಹಿಸಿದ್ದರು.

# ಸಾಧಿಸುವ ಛಲ ವಿದ್ಯಾರ್ಥಿಗಳಿಗೆ ಬೇಕು: ಕೊಂಕಲ್




■ ವಿಜಯಸಾಕ್ಷಿ ಸುದ್ದಿ, ಗಂಗಾವತಿ

ವಿದ್ಯಾರ್ಥಿಗಳಿಗೆ ಜೀವನದಲ್ಲಿ ಸಾಧಿಸುವ ಛಲ ಇರಬೇಕು. ಅಂಥ ಮನೋಭಾವ, ಮನೋಧೋರಣೆಗಳನ್ನು ಬೆಳೆಸಿಕೊಳ್ಳಬೇಕು ಎಂದು ಕೊಪ್ಪಳದ ಶ್ರೀ ಗವಿಸಿದ್ಧೇಶ್ವರ ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಸಹಾಯಕ ಪ್ರಾಧ್ಯಾಪಕ ಡಾ.ಪ್ರಶಾಂತ ಕೊಂಕಲ್ ಹೇಳಿದರು

ಇಲ್ಲಿನ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಣಿಶಾಸ್ತ್ರ ವಿಭಾಗದ ಆಶ್ರಯದಲ್ಲಿ ಹಾಗೂ ಕಾಲೇಜಿನ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಹಯೋಗದಲ್ಲಿ ಶುಕ್ರವಾರ ನಡೆದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಜೇನಿನಂತೆ ಮಧುರವಾಗಿಯೂ, ಒಗ್ಗಟ್ಟಾಗಿಯೂ ಇರಬೇಕು. ಸಕಾರಾತ್ಮಕ ಭಾವನೆಗಳು, ಕ್ರಿಯಾಶೀಲತೆ ಬೆಳೆಸಿಕೊಳ್ಳುವುದರ ಜೊತೆಗೆ ಕನಸು ನನಸಾಗಿಸುವಲ್ಲಿ ಮುನ್ನುಗ್ಗುವ ಪ್ರವೃತ್ತಿ ಹೊಂದಬೇಕು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಜ ಗುರಿಕಾರ ಮಾತನಾಡಿ, ಸಂತಾನೋತ್ಪತ್ತಿ ಕುರಿತು ವಿಶೇಷ ಉಪನ್ಯಾಸದಲ್ಲಿ ಭಾಗಿಯಾಗಿರುವ ವಿದ್ಯಾರ್ಥಿಗಳಾದಿಯಾಗಿ ಬಹುತೇಕರು ಮಂಗನಿಂದ ಮಾನವ ಎಂದುಕೊಂಡಿದ್ದಾರೆ. ಜೀವ ಉತ್ಪತ್ತಿಯ ಪ್ರಯೋಗ ಶುರುವಾಗಿದ್ದು ಕಪ್ಪೆ ಮೂಲಕ ಎಂದು ಸಂಶೋಧನೆಗಳು ಹೇಳುತ್ತವೆ. ಶೂನ್ಯದಿಂದ ಶುರುವಾದ ಬದುಕು ಇಂದು ನಾನಾ ಮಜಲುಗಳಿಗೆ ತೆ-ರೆದುಕೊಂಡಿದೆ. ಈ ದಿನಗಳಲ್ಲಿ ನೈತಿಕ ಶಿಕ್ಷಣದ ಅಗತ್ಯ ಎದ್ದು ಕಾಣುತ್ತಿದೆ ಎಂದು ಅಭಿಪ್ರಾಯಪಟ್ಟರು.

ಕಾಲೇಜಿನ ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥ ಸಲೀಂ ಅವರು ಪ್ರಾಸ್ತಾವಿಕ ಮಾತನಾಡಿದರು. ಸುಷ್ಮಾ ಎಸ್. ನಿರೂಪಿಸಿದರು. ನಫೀಸಾ ಸ್ವಾಗತಿಸಿದರು. ಭೂಮಿಕಾ ವಂದಿಸಿದರು.

ವೇದಿಕೆಯಲ್ಲಿ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಹ ಸಂಚಾಲಕ ಅನಿಲ್ಕುಮಾರ್.ಎ, ಕಾಲೇಜಿನ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರು ಸಹ ಪ್ರಾಧ್ಯಾಪಕರಾದ ಅಣ್ಣೋಜಿ ರೆಡ್ಡಿ, ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರು, ಸಹಾಯಕ ಪ್ರಾಧ್ಯಾಪಕರಾದ ಡಾ.ದೊರೆಬಾಬು, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರು, ಸಹಾಯಕ ಪ್ರಾಧ್ಯಾಪಕರಾದ ಅಕ್ಕಿ ಮಾರುತಿ ಇದ್ದರು. ಈ ಸಂದರ್ಭದಲ್ಲಿ ಕಾಲೇಜಿನ ವಿಜ್ಞಾನ ವಿಭಾಗದ ವಿವಿಧ ಸೆಮಿಸ್ಟರ್ನ ವಿದ್ಯಾರ್ಥಿಗಳು, ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಇದ್ದರು.

ವಿಶೇಷ ಉಪನ್ಯಾಸದ ಬಳಿಕ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ನಡೆಯಿತು. ಸಮಾರಂಭದಲ್ಲಿ ವಿಶೇಷ ಉಪನ್ಯಾಸಕರಾದ ಡಾ.ಪ್ರಶಾಂತ್ ಕೊಂಕಲ್ ಅವರನ್ನು ಗೌರವಿಸಲಾಯಿತು.

# ಜನತಾ ದರ್ಶನ ಬಡವರ ಪಾಲಿನ ಆಶಾಕಿರಣ

▶▶ ಮೊದಲನೇ ಪುಟದಿಂದ

ಮುಂಡರಗಿ ತಾಲೂಕಿನ ಹೆಸರೂರು ಗ್ರಾಮದ ಮಂಜುನಾಥಯ್ಯ ಹಳ್ಳಿ ಅವರು ಭೂಸ್ವಾಧೀನ ಕುರಿತ ಅಹವಾಲು ಸಲ್ಲಿಸಿ, ಜನತಾ ದರ್ಶನ ಕಾರ್ಯಕ್ರಮದಿಂದ ಜನಸಾಮಾನ್ಯರಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಇಂತಹ ಕಾರ್ಯಕ್ರಮಗಳು ತಾಲೂಕು ಮಟ್ಟದಲ್ಲಿಯೂ ನಡೆಯಬೇಕು ಎಂದು ಸಲಹೆ ನೀಡಿದರು.

ಲಕ್ಷ್ಮೇಶ್ವರ ತಾಲೂಕಿನ ಬಾಲೆಹೊಸೂರು ಗ್ರಾಮದ ಮಲ್ಲಿಕಾರ್ಜುನ ವಿ.ದೊಡ್ಡಮನಿ ಅವರು ರೇಷ್ಮೆ ಇಲಾಖೆಯಿಂದ ರೈತರಿಗೆ ಸಹಾಯಧನ ಒದಗಿಸುವಂತೆ ಮನವಿ ಸಲ್ಲಿಸಿದರೆ, ರೋಣ ಗ್ರಾಮದ ಮೆಹಬೂಬ್ ಬಾಬು ಸಾಬ್ ಅವರು ಪಡಿತರ ಚೀಟಿಯಲ್ಲಿ ನೌಕರರ ಹೆಸರು ಇರುವ ಕಾರಣ ವಿಧಿಸಲಾದ 86 ಸಾವಿರ ರೂ ದಂಡ ರದ್ದುಪಡಿಸುವಂತೆ ಕೋರಿದರು.

ಎಲ್ಲಾ ಅಹವಾಲುಗಳನ್ನು ಸಮಾಧಾನದಿಂದ ಆಲಿಸಿದ ಸಚಿವ ಎಚ್.ಕೆ. ಪಾಟೀಲ, ಸಂಬಂಧಿತ ಅಧಿಕಾರಿಗಳಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚಿಸಿ, ತ್ವರಿತ ಪರಿಹಾರ ಒದಗಿಸುವ ಭರವಸೆ ನೀಡಿದರು.

ಒಟ್ಟಾರೆ, ಜನತಾ ದರ್ಶನ ಕಾರ್ಯಕ್ರಮವು ಜನಸಾಮಾನ್ಯರ ಸಮಸ್ಯೆಗಳಿಗೆ ನೇರ ಸ್ಪಂದನೆ ದೊರಕಿಸುವ ವೇದಿಕೆಯಾಗಿ ರೂಪುಗೊಂಡಿದ್ದು, ಬಡವರು ಮತ್ತು ರೈತರ ಪಾಲಿಗೆ ಆಶಾಕಿರಣವಾಗಿ ಪರಿಣಮಿಸಿದೆ ಎಂಬ ಅಭಿಪ್ರಾಯ ಸಾರ್ವಜನಿಕರಿಂದ ವ್ಯಕ್ತವಾಯಿತು.

# ಮಾ. 1ರಂದು 'ಕನ್ನಡದ ಕೋಟ್ಯಾಧಿಪತಿ'

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ. 1ರಲ್ಲಿ ಮಾರ್ಚ್ 1ರಂದು ಸಾಯಂಕಾಲ 6 ಗಂಟೆಗೆ ಪಟ್ಟಣದ ಮಂಜುನಾಥ ಮಟ್ಟಿ ಅವರ ಮಾತೋಶ್ರೀ ದಿ. ಸಾವಂತ್ರವ್ವ ಬಸವಂತಪ್ಪ ಮಟ್ಟಿ ಇವರ ಸ್ಮರಣಾರ್ಥ ಸ್ಥಾಪನೆಗೊಂಡ ಅವ್ವ ಸೇವಾ ಪ್ರತಿಷ್ಠಾನದ ವತಿಯಿಂದ 2ನೇ ಬಾರಿಗೆ 'ಕನ್ನಡದ ಕೋಟ್ಯಾಧಿಪತಿ' ಕಾರ್ಯಕ್ರಮ ನಡೆಯಲಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ ವಹಿಸುವರು. ಉದ್ಘಾಟನೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ನೆರವೇರಿಸುವರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ, ಡಾ. ಎಸ್.ಸಿ. ಚವಡಿ, ಎಸ್.ಸಿ. ಬಡ್ನಿ, ಮಂಗಳಾ ನೀಲಗುಂದ, ಅವ್ವ ಸೇವಾ ಪ್ರತಿಷ್ಠಾನ ಅಧ್ಯಕ್ಷ ಬಸವಂತಪ್ಪ ಮಟ್ಟಿ, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಸರ್ವ ಸದಸ್ಯರು, ಶಾಲಾ ಎಸ್‌ಡಿಎಂಸಿ ಸರ್ವ ಸದಸ್ಯರು ಭಾಗವಹಿಸುವರು ಎಂದು ಶಿಕ್ಷಕ ಮಂಜುನಾಥ ಮಟ್ಟಿ ಪ್ರಕಟಣೆಗೆ ತಿಳಿಸಿದ್ದಾರೆ.

# ಜನತಾ ದರ್ಶನ ಕಾರ್ಯಕ್ರಮ ಇತರರಿಗೂ ಮಾದರಿಯಾಗಲಿ

▶▶ ಮೊದಲನೇ ಪುಟದಿಂದ

ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವವೇ ದಿನನಿತ್ಯದ ಕಚೇರಿ ಕೆಲಸದಲ್ಲಿ ಆಗಬೇಕೆಂದು ಸಚಿವ ಡಾ. ಎಚ್.ಕೆ. ಪಾಟೀಲ ನಿರ್ದೇಶನ ನೀಡಿದರು.

ಗದಗ ತಹಸೀಲ್ದಾರರ ಕಚೇರಿ ಕಡತಗಳ ನಿರ್ವಹಣೆ ಬಗ್ಗೆ ವಿಚಾರಿಸಿದಾಗ 440 ಅರ್ಜಿಗಳು ಬಾಕಿ ಉಳಿದಿದ್ದು, ಅದರಲ್ಲಿ 280 ಅರ್ಜಿಗಳನ್ನು ಇತ್ಯರ್ಥಗೊಳಿಸಲಾಗಿದೆ. 156 ಆದೇಶದ ಪ್ರತಿಯನ್ನು ಈ ಕಾರ್ಯಕ್ರಮದಲ್ಲಿ ಹಂಚಿಕೆ ಮಾಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವರು ತಿಳಿಸಿರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಮಟ್ಟದ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಗಣ್ಯರಾದ ಸಿದ್ದು ಪಾಟೀಲ, ಸುಜಾತಾ ದೊಡಮನಿ, ತಾಲೂಕು ಮಟ್ಟದ ತಹಸೀಲ್ದಾರರು, ತಾ.ಪಂ ಕಾರ್ಯ ಕಾರ್ಯನಿರ್ವಹಣಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ವಿವಿಧ ಇಲಾಖೆಯ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

ವೆಂಕಟೇಶ ಅಲ್ಕೋಡ್ ತಂಡದಿಂದ ನಾಡಗೀತೆ ಪ್ರಸ್ತುತಪಡಿಸಿದರು. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

**ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಜನ್ಮದಿನದ ಅರ್ಥಪೂರ್ಣ ಆಚರಣೆ**

# ವಿಶೇಷ ಚೇತನ ಮಕ್ಕಳಿಗೆ ಅಗತ್ಯ ಸೌಲಭ್ಯ



ಜಿಲ್ಲಾ ಉಸ್ತುವಾರಿ ಸಚಿವರ ಜನ್ಮದಿನದ ಹಿನ್ನೆಲೆಯಲ್ಲಿ ಸರ್ಕಾರೇತರ ಸಂಸ್ಥೆಗಳು ಹಾಗೂ ಇಲಾಖೆಗಳಿಂದ ಸಮಾಜಮುಖಿ ಕಾರ್ಯ ನೆರವೇರುತ್ತಿದೆ. ಜಿಲ್ಲಾ ಪಂಚಾಯಿತಿಯಿಂದ ಹಾಗೂ ಗ್ರಾಮ ಪಂಚಾಯಿತಿಗಳಿಂದ ವಿಕಲಚೇತನರ ಅಭಿವೃದ್ಧಿಗಾಗಿ ವಿಶೇಷ ಅನುದಾನಗಳನ್ನು ನೀಡಲಾಗುತ್ತಿದೆ ಎಂದು ಸಿಇಓ ಭುವನೇಶ ಪಾಟೀಲ ಅವರು ತಿಳಿಸಿದರು.



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲೆಯ ಎಲ್ಲ ವಿಶೇಷ ಚೇತನ ಹಾಗೂ ದಿವ್ಯಾಂಗ ಮಕ್ಕಳ ಸಮೀಕ್ಷೆಯನ್ನು ಕೈಗೊಳ್ಳಲಾಗಿದ್ದು, ಅವರಿಗೆ ಅಗತ್ಯವಿರುವ ಉಪಕರಣ ಹಾಗೂ ಸೌಲಭ್ಯಗಳನ್ನು ಸರ್ಕಾರದಿಂದ ನೀಡಲಾಗುತ್ತಿದೆ. ವಿಶೇಷ ಚೇತನರನ್ನು ಸಂರಕ್ಷಿಸುತ್ತಿರುವ ಕುಟುಂಬಗಳಿಗೂ ಸರ್ಕಾರದ ನಿಯಮಾನುಸಾರ ನೆರವು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಶಿಕ್ಷಕಿಯರ ಸರ್ಕಾರಿ ತರಬೇತಿ ಕಾಲೇಜು (ಟಿಸಿಡಬ್ಲ್ಯೂ) ಸಭಾಂಗಣದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸಂತೋಷ ಲಾಡ್ ಫೌಂಡೇಶನ್ ಮತ್ತು ಜನಮುಖಿ ಸೇವಾ ಸಂಸ್ಥೆ ಸಂಯುಕ್ತವಾಗಿ ಆಯೋಜಿಸಿದ್ದ ವಿಶೇಷ ಚೇತನರು ಹಾಗೂ ಅವರ ಕುಟುಂಬದವರೊಂದಿಗೆ ಸಂವಾದ ಮತ್ತು ಸಂತೋಷ ಲಾಡ್ ಫೌಂಡೇಶನ್ ನೀಡಿರುವ ವಿಕಲಚೇತನರ ಸಾಧನಗಳನ್ನು ವಿತರಿಸಿ ಮಾತನಾಡಿದರು.

ವಿಕಲಚೇತನರನ್ನು ವಿಶೇಷ ಕಾಳಜಿ ಮತ್ತು ಹೆಮ್ಮೆಯಿಂದ ಸಂರಕ್ಷಿಸಬೇಕು. ಅವರ ಬಗ್ಗೆ ಕೇವಲ ಕರುಣೆ ತೋರದೆ, ನ್ಯಾಯಯುತವಾಗಿ ಅವರಿಗೆ ಸಿಗಬೇಕಾದ ಸರ್ಕಾರಿ ಸೌಲಭ್ಯಗಳನ್ನು ತಲುಪಿಸುವಲ್ಲಿ ಇಲಾಖೆಗಳು, ಅಧಿಕಾರಿಗಳು ಮತ್ತು ಸರ್ಕಾರೇತರ ಸಂಸ್ಥೆಗಳು ಕ್ರಮ ವಹಿಸಬೇಕೆಂದು ಅವರು ಹೇಳಿದರು.

ಸಂತೋಷ ಲಾಡ್ ಫೌಂಡೇಶನ್ ವತಿಯಿಂದ ಮಾದರಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸಚಿವರ ಜನ್ಮದಿನದ ಹಿನ್ನೆಲೆಯಲ್ಲಿ ಅನೇಕ ವಿಕಲಚೇತನ ಮಕ್ಕಳಿಗೆ ವೀಲ್ ಚೇರ್, ಆಟಿಕೆ ಸಾಮಾನು, ಹಣ್ಣು ಹಾಗೂ ಧಾನ್ಯದ ಕಿಟ್ ಮತ್ತು ವಿಕಲಚೇತನ ಮಗುವಿಗೆ ಆರ್ಥಿಕ ಸಹಾಯ ನೀಡಲಾಗಿದೆ. ವಿಕಲಚೇತನ ಹಾಗೂ ದಿವ್ಯಾಂಗ ಮಕ್ಕಳ ಯೋಗಕ್ಷೇಮ ಹಾಗೂ ಅವರ ಆರೋಗ್ಯ ಮತ್ತು ಸಂರಕ್ಷಣೆಗೆ ಸರ್ಕಾರದೊಂದಿಗೆ ಸರ್ಕಾರೇತರ ಸಂಸ್ಥೆಗಳು ಕೈಜೋಡಿಸಬೇಕು. ಇದರಿಂದ ವಿಕಲಚೇತನರಲ್ಲಿಯೂ ಬದುಕಿನ ಆತ್ಮವಿಶ್ವಾಸ ಮೂಡುತ್ತದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಮಾತನಾಡಿ, ವಿಶೇಷ ಕಾಳಜಿ ಮತ್ತು ಆತ್ಮವಿಶ್ವಾಸದ ಅಗತ್ಯವಿರುವ ವಿಶೇಷ ಚೇತನ ಹಾಗೂ ದಿವ್ಯಾಂಗ ಮಕ್ಕಳಿಗೆ ಸರ್ಕಾರಕ್ಕಿಂತ ಸಮಾಜದ ಹಾಗೂ ಸಮುದಾಯದ ಬೆಂಬಲದ ಅಗತ್ಯವಿದೆ. ವಿಶೇಷ ಚೇತನರಲ್ಲಿ ಸಾಮಾನ್ಯಗಿಂತ ವಿಶೇಷವಾದ ಬುದ್ಧಿವಂತಿಕೆ ಹಾಗೂ ಜ್ಞಾನ ಇರುತ್ತದೆ. ಇದನ್ನು ಗುರುತಿಸಿ, ಪ್ರೋತ್ಸಾಹಿಸುವ ಅಗತ್ಯವಿದೆ ಎಂದು ಹೇಳಿದರು.

**ಕನಕ ಸಾಹಿತ್ಯ ಸಂಭ್ರಮ, 100ನೇ ಉಪನ್ಯಾಸ ಕಾರ್ಯಕ್ರಮ**

# ಮಾ. 1ರಂದು ಕನಕ ಸಾಹಿತ್ಯ ಸಂಭ್ರಮ




ಇದೇ ಸಂದರ್ಭದಲ್ಲಿ ಗದಗ, ರೋಣ, ಮುಂಡರಗಿ, ನರಗುಂದ, ಶಿರಹಟ್ಟಿ, ಲಕ್ಷ್ಮೇಶ್ವರ ಮತ್ತು ಗಜೇಂದ್ರಗಡ ಪದವಿಪೂರ್ವ ಕಾಲೇಜಿನ ಮತ್ತು ಪ್ರೌಢಶಾಲೆಯ ಹಂತದ ಕನಕದಾಸರ ಸಾಹಿತ್ಯ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಹಾಗೂ 76ರಿಂದ 100ನೇ ಆನ್‌ಲೈನ್ ಗೂಗಲ್ ಮೀಟ್‌ನಲ್ಲಿ ಕನಕದಾಸರ ಸಾಹಿತ್ಯದ ಉಪನ್ಯಾಸ ನೀಡಿದವರಿಗೆ ಸನ್ಮಾನ ಮಾಡಲಾಗುತ್ತದೆ. ಕನಕದಾಸರ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ 42 ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಪ್ರಮಾಣ ಪತ್ರ ವಿತರಣೆ ಮಾಡಲಾಗುತ್ತದೆ ಎಂದು ಫಕೀರಪ್ಪ ಹೆಬಸೂರ ತಿಳಿಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಕನಕದಾಸರ ಸಾಹಿತ್ಯ ಪ್ರಚಾರ ಸಮಿತಿಯ ಸಹಯೋಗದೊಂದಿಗೆ ಮಾ. 1ರಂದು ಬೆಳಗ್ಗೆ 9.30ಕ್ಕೆ ನಗರದ ಕನಕ ಭವನದಲ್ಲಿ ಕನಕ ಸಾಹಿತ್ಯ ಸಂಭ್ರಮ ಹಾಗೂ 100ನೇ ಉಪನ್ಯಾಸದ ವೇದಿಕೆಯ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ಜಿಲ್ಲಾ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ರಾಮಕೃಷ್ಣ ಯೋಗಾಶ್ರಮದ ಜಗದ್ಗುರು ಸ್ವಾಮಿ ಯೋಗೇಶ್ವರಾನಂದ ಸ್ವಾಮೀಜಿ, ಮನಸೂರ ಜ. ಡಾ. ಬಸವರಾಜ ದೇವರು ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಜಿಲ್ಲಾ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಅಧ್ಯಕ್ಷತೆ ವಹಿಸುವರು. ಹಾಲುಮತ ಭಾಸ್ಕರ ರಾಜ್ಯ ಕನಕಶ್ರೀ ಪ್ರಶಸ್ತಿ ಪುರಸ್ಕೃತ ಡಾ.ಲಿಂಗದಾಳ ಹಾಲಪ್ಪ ಕಾರ್ಯಕ್ರಮ ಉದ್ಘಾಟನೆ ಮಾಡುವರು.

ಕೆ.ಎಚ್. ಪಾಟೀಲ ಕಾಲೇಜು ಪ್ರಾಧ್ಯಾಪಕಿ ಡಾ. ಸುಧಾ ಕೌಜಗೇರಿ ಉಪನ್ಯಾಸ ನೀಡುವರು. ಹಸ್ತಪ್ರತಿ ಶಾಸ್ತ್ರ ಪ್ರಾಧ್ಯಾಪಕ ಪ್ರೊ. ಎಫ್.ಟಿ. ಹಳ್ಳಿಕೇರಿ, ಮಂಜುನಾಥ ಹೊನ್ನಣ್ಣವರ, ಡಾ. ಹನಮಗೌಡ ಪಾಟೀಲ, ವಾಸಣ್ಣ ಕುರಡಗಿ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ರವಿ ದಂಡಿನ, ಪ್ರಕಾಶ ಕರಿ, ಸುರೇಶ ಕೊಪ್ಪದ, ರಾಜಶೇಖರ ಕಲ್ಲೂರ, ಸಿದ್ಧಲಿಂಗ ಬಂಡು, ಆರ್.ಎಸ್. ಬುರಡಿ, ರಾಮಕೃಷ್ಣ ರೊಳ್ಳಿ ಮುಂತಾದವರು ಬಾಗವಹಿಸುವರು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಆರ್.ಜಿ. ಕಲ್ಲೂರ, ಬಿ.ಎಸ್. ಕೆರಿ, ಈರಪ್ಪ ಹಳ್ಯಾಳ, ಸಿದ್ದು ಸತ್ಯಣ್ಣವರ, ಪ್ರೊ. ಮಾರುತಿ ಮಡ್ಡಿ, ಸಿದ್ಧಲಿಂಗೇಶ್ವರ ಯಂಡಿಗೇರಿ, ಹೇಮಂತ ಗಿಡ್ಡಹಣ್ಣಮನವರ, ಸೋಮನಗೌಡ ಪಾಟೀಲ, ಮುತ್ತು ಜಡಿ, ರಾಘು ವಗ್ಗನವರ ಇತರರು ಇದ್ದರು.



ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಶುಕ್ರವಾರ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ತಾಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ವಿಕಲಚೇತನರ ಕಲ್ಯಾಣ ಇಲಾಖೆ ಅಧಿಕಾರಿ ಮಹಾಂತೇಶ ಕೆ, ಗಣ್ಯರಾದ ಎಸ್.ಎನ್. ಬಳ್ಳಾರಿ, ಸುಜಾತಾ ದೊಡ್ಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ನರೇಗಲ್ಲ ಬ್ರಹ್ಮ ಸಮಾಜದ ಒಗ್ಗಟ್ಟು ಸ್ಮರಣೀಯ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪಟ್ಟಣದಲ್ಲಿ ಬ್ರಹ್ಮ ಸಮಾಜದ ಮನೆಗಳು ಬಹಳಷ್ಟಿಲ್ಲ. ಆದರೆ ಇದ್ದಷ್ಟು ಮನೆಗಳಲ್ಲಿನ ಎಲ್ಲ ಬ್ರಾಹ್ಮಣರೂ ಒಕ್ಕಟ್ಟಾಗಿರುವುದರಿಂದ ಇಲ್ಲಿ ಅನೇಕ ಧಾರ್ಮಿಕ ಕಾರ್ಯಗಳು ನಡೆಯುತ್ತಿವೆ ಎಂದು ಬ್ರಹ್ಮ ಸಮಾಜದ ಹಿರಿಯರಾದ ಡಾ. ಜಿ.ಕೆ. ಕಾಳೆ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಜರುಗಿದ ಸಭೆಯಲ್ಲಿ ಅವರು ಮಾತನಾಡಿದರು.

ಪಟ್ಟಣದ ಜನಸಂಖ್ಯೆಗೆ ಹೋಲಿಸಿದರೆ ನಮ್ಮದು ಸಣ್ಣ ಸಮಾಜ. ಆದರೆ ನಮ್ಮಲ್ಲಿನ ಒಗ್ಗಟ್ಟು ನಮ್ಮನ್ನು ಇಡೀ ಜಿಲ್ಲೆಯ ಜನ ಎದಿರು ನೋಡುವಂತೆ ಮಾಡಿದೆ. ನಮ್ಮ ದೇವಸ್ಥಾನದಲ್ಲಿ ಪ್ರತಿ ವರ್ಷ 13 ದಿನಗಳ ಕಾಲ ನಡೆಯುವ ಶ್ರೀ ಗುರು ಪ್ರತಿಪದೆ ಉತ್ಸವ, 2007ರಲ್ಲಿ ಸರ್ವ ಸಮಾಜ ಬಾಂಧವರ ಸಹಕಾರದಿಂದ ಜರುಗಿದ ಶ್ರೀ ಸಹಸ್ರ ಚಂಡಿಕಾ ಮಹಾಯಾಗ, ಶ್ರೀ ಗುರು ದತ್ತ ಪಾದುಕಾ ಶತಮಾನೋತ್ಸವ, ಕಳೆದ ಡಿಸೆಂಬರ್‌ನಲ್ಲಿ ಜರುಗಿದ 11 ತಾಸುಗಳ ಅಖಂಡ ಹನುಮಾನ್ ಚಾಲೀಸಾ ಪಠಣದಂತಹ ಧಾರ್ಮಿಕ ಕಾರ್ಯಗಳು ಬರೀ ಗದಗ ಜಿಲ್ಲೆಯಲ್ಲಷ್ಟೇ ಅಲ್ಲದೆ, ಅಖಂಡ ಧಾರವಾಡ ಜಿಲ್ಲೆಯಲ್ಲಿಯ ಭಕ್ತರ ಗಮನವನ್ನು ಸೆಳೆದಿರುವುದು ಇದೇ ಕಾರಣಕ್ಕೆ ಎಂದರು.

ಸಭೆಯಲ್ಲಿ ಶ್ರೀ ದತ್ತ ಉತ್ಸವದಲ್ಲಿ ಅಡುಗೆ ಮಾಡಿದ ಸುಮಂತ ಕುಲಕರ್ಣಿ, ದತ್ತಾತ್ರೇಯ ದೇವಸ್ಥಾನದ ಉಸ್ತುವಾರಿ ಪ್ರಶಾಂತ ಗ್ರಾಮಪುರೋಹಿತ ಹಾಗೂ ಅನಸೂಯಾ ಮಹಿಳಾ ಮಂಡಳದ ಅಧ್ಯಕ್ಷೆ ವಿಮಲಾಬಾಯಿ ಗ್ರಾಮಪುರೋಹಿತ ಅವರನ್ನು ಸನ್ಮಾನಿಸಲಾಯಿತು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯನ್ನುದ್ದೇಶಿಸಿ ಡಾ. ಕೃಷ್ಣ ಕಾಳೆ, ಗುರುರಾಜ ಕುಲಕರ್ಣಿ, ಅರುಣ ಗ್ರಾಮಪುರೋಹಿತ, ಡಾ. ಸಪ್ನಾ ಕಾಳೆ, ಶ್ರೀಪಾದಭಟ್ಟ ಜೋಷಿ, ಡಾ. ನಾಗರಾಜ ಗ್ರಾಮಪುರೋಹಿತ ಮತ್ತಿತರರು ಮಾತನಾಡಿದರು. ಕಾರ್ಯದರ್ಶಿರಘುನಾಥ ಕೊಂಡಿ ನಿರ್ವಹಿಸಿದರು.

ಶ್ರೀ ದತ್ತ ಭಕ್ತ ಮಂಡಳಿಯ ಅಧ್ಯಕ್ಷ ಡಾ. ನಾಗರಾಜ ಗ್ರಾಮಪುರೋಹಿತ ಕಳೆದ ಉತ್ಸವದ ಆಯ-ವ್ಯಯವನ್ನು ಮಂಡಿಸಿದರು.

# ಜನತಾ ದರ್ಶನದಲ್ಲಿ 1067 ಅಹವಾಲುಗಳ ಸ್ವೀಕೃತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶುಕ್ರವಾರ ಜರುಗಿದ ಜಿಲ್ಲಾ ಮಟ್ಟದ ಜನತಾ ದರ್ಶನದಲ್ಲಿ ಜನಸಾಮಾನ್ಯರಿಂದ ಅಹವಾಲುಗಳ ಮಹಾಪೂರವೇ ಹರಿದು ಬಂದಿದೆ. ಸಾರ್ವಜನಿಕರಿಂದ 767 ಅಹವಾಲುಗಳು ನೇರವಾಗಿ ದಾಖಲಾಗಿವೆ, 300 ಆನ್ ಲೈನ್ ಮೂಲಕ ಅರ್ಜಿಗಳು ಬಂದಿದ್ದು, ಒಟ್ಟು 1067 ವಿವಿಧ ರೀತಿಯ ಅಹವಾಲುಗಳು ಜನತಾ ದರ್ಶನದಲ್ಲಿ ಸ್ವೀಕೃತವಾಗಿವೆ.

ಇವುಗಳಲ್ಲಿ 900 ಅರ್ಜಿಗಳನ್ನು ಪರಿಶೀಲನೆ ಮಾಡಲಾಗಿದೆ. 150 ಅಹವಾಲುಗಳನ್ನು ವಿವರವಾಗಿ ಪರೀಶಿಲನೆ ನಡೆಸಲಾಗಿದೆ. ಜನತಾ ದರ್ಶನ ಕಾರ್ಯಕ್ರಮ ಅತ್ಯಂತ ಶಾಂತಿ, ಶಿಸ್ತಿನಿಂದ ಜರುಗಿದ್ದು, ಇದಕ್ಕೆ ಡಿಸಿ ಸಿ.ಎನ್. ಶ್ರೀಧರ, ಎಸ್‌ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ ಸೇರಿದಂತೆ ಎಲ್ಲ ಅಧಿಕಾರಿಗಳು ಕಾರಣರಾಗಿದ್ದಾರೆ, ಎಲ್ಲರಿಗೂ ಅಭಿನಂದನೆಗಳು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಡಾ. ವೆಂಕಟೇಶ ಆಲ್ಕೋಡ್ ತಂಡದ ಪ್ರಾರ್ಥನೆ, ನಾಡಗೀತೆಯೊಂದಿಗೆ ಆರಂಭವಾದ ಜನತಾ ದರ್ಶನ ಅಂತಿಮವಾಗಿ ಪೊಲೀಸ್ ಬ್ಯಾಂಡ್‌ನ ರಾಷ್ಟ್ರಗೀತೆಯೊಂದಿಗೆ ಮುಕ್ತಾಯವಾಯಿತು.





ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರು ಶುಕ್ರವಾರ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಾಮಾಜಿಕ ಭದ್ರತಾ ಯೋಜನೆಗಳ ಆದೇಶದ ಪ್ರತಿಗಳನ್ನು ಫಲಾನುಭವಿಗಳಿಗೆ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಬಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ ಕೆ, ಅಪರ ಜಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ತಾಲೂಕು ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗಣ್ಯರಾದ ಸಿದ್ದು ಪಾಟೀಲ, ಎಸ್.ಎನ್. ಬಳ್ಳಾರಿ, ಸುಜಾತಾ ದೊಡ್ಡಮನಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಶೋಭಾ ಪಾಟೀಲರಿಗೆ ಸಾವಿತ್ರಿಬಾಯಿ ಫುಲೆ ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ



ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಬೆಂಗಳೂರು 55ನೇ ವರ್ಷದ ಸುವರ್ಣ ಮಹೋತ್ಸವ ಕಾರ್ಯಕ್ರಮ, ಗುರುವಂದನಾ, ರಾಜ್ಯ ಮಟ್ಟದ ಶೈಕ್ಷಣಿಕ ಮಾಹಾ ಸಮ್ಮೇಳನ, ಧನ್ಯತಾ ಸಮಾರಂಭದಲ್ಲಿ ರಾಜ್ಯ ಮಟ್ಟದ ಉತ್ತಮ ಸಾಧಕ ಶಿಕ್ಷಕಿಗೆ ಕೊಡಮಾಡುವ 'ಸಾವಿತ್ರಿಬಾಯಿ ಫುಲೆ ಪ್ರಶಸ್ತಿ'ಯನ್ನು ಮುಳಗುಂದ ಪಟ್ಟಣದ ಸರಕಾರಿ ಮಾದರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯ ಸಹ ಶಿಕ್ಷಕಿ ಶೋಭಾ ಪಾಟೀಲ ಅವರಿಗೆ ನೀಡಿ ಸನ್ಮಾನಿಸಲಾಗುವುದು ಎಂದು ಶಾಲಾ ಪ್ರಧಾನ ಗುರು ಪಿ.ಎಸ್. ಮರಿದೇವರಮಠ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka